ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೭೫

ಪಟ್ಟಿ – ೧೭

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಮಂಗಳವಾರ, ದಿನಾಂಕ : ೨೧ನೇ ಜುಲೈ, ೨೦೧೫**

---

## ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

F-1 B/B

## ಹನಿ ನೀರಾವರಿ ಅನುಷ್ಠಾನದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪೧ (೧೯೫೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯ ವತಿಯಿಂದ ಯಾವ ಯಾವ ಬೆಳೆಗಳಿಗೆ ಹನಿ ನೀರಾವರಿ ಅಳವಡಿಸಲು ಸಬ್ಸಿಡಿ ನೀಡಲಾಗುತ್ತದೆ ;

(ಆ) ಪ್ರತಿ ಬೆಳೆಗೆ ಶೇಕಡ ಎಷ್ಟು ಪ್ರಮಾಣದಲ್ಲಿ ಸಬ್ಸಿಡಿ ನೀಡಲಾಗುತ್ತದೆ ;

(ಇ) ಈ ಸಬ್ಸಿಡಿ ನೀಡುವಿಕೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಶೇಕಡ ಎಷ್ಟು ಪ್ರಮಾಣದಲ್ಲಿ ನೀಡಲಾಗುತ್ತದೆ ;

(ಈ) ೨೦೧೩-೧೪, ೨೦೧೪-೧೫ನೇ ಸಾಲಿನಲ್ಲಿ ಎಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮತ್ತು ಯಾರ್‍ಯಾರಿಗೆ ಯಾವ ಯಾವ ಬೆಳೆಗೆ ಎಷ್ಟೆಷ್ಟು ಸಬ್ಸಿಡಿ ನೀಡಲಾಗಿದೆ ? (ವರ್ಷವಾರು ವಿವರ ನೀಡುವುದು)

## ಜಲಾನಯನ ಕಾಮಗಾರಿಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪೨ (೧೪೧೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ಇಲಾಖಾ ವತಿಯಿಂದ (ಹಿಂದಿನ ಜಲಾನಯನ ಇಲಾಖೆ, ಈಗಿನ ಕೃಷಿ ಇಲಾಖೆ) ಉ.ಕ. ಜಿಲ್ಲೆಯ ಶಿರಸಿ ಹಾಗೂ ಸಿದ್ದಾಪುರ

ತಾಲ್ಲೂಕುಗಳಲ್ಲಿ ೨೦೧೦ ರಿಂದ ಕೈಗೊಂಡ ಕಾಮಗಾರಿಗಳು ಯಾವುವು ; ವಿವರ ಹಾಗೂ ಆಡಿಟ್ ಪ್ರತಿಯೊಂದಿಗೆ ನೀಡುವುದು (ಕಾಮಗಾರಿವಾರು ಅಂದಾಜು ಪ್ರತಿ, ಬಿಲ್ ಪ್ರತಿ, ಎಂ.ಬಿ. ಪ್ರತಿ ಹಾಗೂ ಕಾಮಗಾರಿಯ ಫೋಟೊ ಸಮೇತ ಮಾಹಿತಿ ನೀಡುವುದು)

(ಆ) ೨೦೧೦ ರಿಂದ ೨೦೧೫ನೇ ಸಾಲಿನವರೆಗೆ ಈ ತಾಲ್ಲೂಕುಗಳಲ್ಲಿ ರಚಿಸಲ್ಪಟ್ಟ ಜಲಾನಯನ ಸಂಘಗಳು ಯಾವುವು ; ಅವುಗಳ ಅಧ್ಯಕ್ಷರು ಹಾಗೂ ಸದಸ್ಯರ ಹೆಸರುಗಳು ಹಾಗೂ ಕೈಗೊಂಡ ಕಾಮಗಾರಿಯ ವಿವರ ನೀಡುವುದು ?

## ತೆಂಗಿನ ಮರದ ನುಸಿ ಪೀಡೆ ರೋಗ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪೩ (೧೪೧೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನುಸಿ ಪೀಡೆ ರೋಗದಿಂದ ನಶಿಸಿದ ತೆಂಗಿನಮರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವರ್ಷಾವಾರು ಮಾಹಿತಿ ನೀಡುವುದು)

(ಆ) ಈ ಖಾಯಿಲೆ ಯಾವ ವರ್ಷದಿಂದ ಕಂಡುಬಂದಿರುತ್ತದೆ ; ಈ ನುಸಿ ಪೀಡೆ ರೋಗದ ವೈಜ್ಞಾನಿಕ ಹೆಸರೇನು ;

(ಇ) ಈ ನುಸಿ ಪೀಡೆ ರೋಗವನ್ನು ಹತೋಟಿಗೆ ತರಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಸರ್ಕಾರವು ಈ ರೋಗಕ್ಕೆ ಯಾವುದಾದರೂ ವಿಶ್ವವಿದ್ಯಾಲಯ/ ಸಂಶೋಧನಾ ಸಂಸ್ಥೆಯಲ್ಲಿ ಇದರ ಬಗ್ಗೆ ಸಂಶೋಧನೆಯನ್ನು ಮಾಡಿದೆಯೇ ; ಮಾಡಿದ್ದಲ್ಲಿ, ವರದಿಯ ಪ್ರತಿ ನೀಡುವುದು ;

(ಉ) ಸಂಶೋಧನೆ ಕೈಗೊಳ್ಳದಿದ್ದ ಸಮಯದಲ್ಲಿ ಯಾವುದಾದರು ಸಂಸ್ಥೆ ಸಂಶೋಧನೆಗೆ ಮುಂದೆ ಬಂದರೆ ಅದಕ್ಕೆ ಸಹಾಯ ಮಾಡುವ ಇಚ್ಛಾಶಕ್ತಿ ಸರ್ಕಾರಕ್ಕೆ ಇದೆಯೇ ?

## ಕೋಲಾರ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪೪ (೧೯೬೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ಕೈಗೊಂಡ ಕಾರ್ಯಕ್ರಮಗಳು ಯಾವುವು ;

(ಆ) ಪ್ರತಿ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಹಣ ಖರ್ಚು ಮಾಡಲಾಗಿದೆ ; ಹಾಗೂ ಯಾವ ಯಾವ ಕಾರ್ಯಕ್ರಮಗಳು ಪೂರ್ಣಗೊಂಡಿದೆ ;

(ಇ) ಇವುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳಿಗೆ (ಎಸ್.ಸಿ.ಪಿ.) ವಿಶೇಷ ಘಟಕ ಯೋಜನೆಗಳಡಿಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ; ಮತ್ತು ಎಷ್ಟು

ಹಣ ಖರ್ಚು ಮಾಡಲಾಗಿದೆ ; ಪೂರ್ಣಗೊಂಡ ಕಾರ್ಯಕ್ರಮಗಳು ಯಾವುವು ; ಅಪೂರ್ಣಗೊಂಡ ಕಾರ್ಯಕ್ರಮಗಳು ಯಾವುವು ? (ವಿವರ ನೀಡುವುದು)

## ಕೃಷಿ ಇಲಾಖೆಯ ಜಲಾನಯನ ಕಾರ್ಯಕ್ರಮಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪೫ (೧೯೬೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಜಲಾನಯನ ಕಾರ್ಯಕ್ರಮದಡಿಯಲ್ಲಿ ಕೈಗೊಂಡ ಕಾರ್ಯಕ್ರಮಗಳು ಯಾವುವು ;

(ಆ) ಎಲ್ಲೆಲ್ಲಿ ಈ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಪ್ರತಿ ಕಾರ್ಯಕ್ರಮಗಳಿಗೆ ಖರ್ಚು ಮಾಡಿದ ಹಣವೆಷ್ಟು ;

(ಈ) ಪೂರ್ಣಗೊಂಡ ಕಾರ್ಯಕ್ರಮಗಳು ಯಾವುವು ?

## ರಾಜ್ಯದಲ್ಲಿ ಬೆಳೆಗಳ ಉತ್ಪಾದನೆ ಮತ್ತು ಪ್ರೋತ್ಸಾಹದ ಬಗ್ಗೆ

**ಶ್ರೀ ವಿ. ಸೋಮಣ್ಣ ಮತ್ತು ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪೬ (೧೪೨೫+೧೪೩೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ವರ್ಷ ಬರ ಹಾಗೂ ಅಕಾಲಿಕ ಮಳೆಯಿಂದಾಗಿ ರಾಜ್ಯಾದ್ಯಂತ ಏಕದಳ, ದ್ವಿದಳ ಧಾನ್ಯಗಳ ಬೆಳೆ ಕುಂಠಿತವಾಗಿರುವುದು ಕಂಡು ಬಂದಿದೆಯೇ ;

(ಆ) ಇದರಿಂದಾಗಿ ಆಹಾರ ಧಾನ್ಯ ಉತ್ಪಾದನೆಗೆ ಹಾಗೂ ಧಾನ್ಯ ಸಂಗ್ರಹಕ್ಕೆ ತೊಂದರೆಯಾಗಿದ್ದು ನಿಜವೇ ;

(ಇ) ಹಾಗಿದ್ದಲ್ಲಿ, ರಾಜ್ಯದಲ್ಲಿ ಯಾವ ಯಾವ ಭಾಗದಲ್ಲಿ ಯಾವ ಯಾವ ಬೆಳೆಗಳ ಉತ್ಪಾದನೆ ಕುಂಠಿತಗೊಂಡಿದೆ ; (ಜಿಲ್ಲಾವಾರು ಬೆಳೆಗಳವಾರು ವಿವರ ಒದಗಿಸುವುದು)

(ಈ [illegible] ಗಳ ಬೆಳೆಯ ನಷ್ಟದ ವಿವರಗಳನ್ನು

ಡುವ ಸಹಾಯ

ಈ ಸಾಲಿನ ಬೆಳೆಯ

**ಮಗೊಳಿಸುವುದು**

**ಯಿತರಾದವರು) :-**

ಸಚಿವರು ಈ ವಿಷಯಗಳನ್ನು

ವಿದ್ಯುತ್ ಪಂಪ್‌ಸೆಟ್ಸ್‌ಗಳ ಸಂಖ್ಯೆ

ಸಕ್ರಮಗೊಳಿಸಲು ಸರ್ಕಾರ

ಯಾವಾಗಿನಿಂದ ಜಾರಿಗೆ ಬರುತ್ತದೆ ;

ಮಾನದಂಡಗಳೇನು ;

ಗೂ ಅಕ್ರಮ ಸಂಪರ್ಕಗಳೆಷ್ಟು ; (ಜಿಲ್ಲಾವಾರು

)

ಚಿತ ವಿದ್ಯುತ್ ಪಡೆಯಬಹುದೇ ; ಇಲ್ಲದಿದ್ದಲ್ಲಿ,

ವಿದ್ಯುತ್ ಶುಲ್ಕವೆಷ್ಟು ; (ವಿವರ ಒದಗಿಸುವುದು)

(ಈ) ಸಕ್ರಮಕ್ಕೆ ಬಾಕಿ ಇರುವ ಪ್ರಕರಣಗಳೆಷ್ಟು ; ಸಕ್ರಮ ಮಾಡಿಕೊಳ್ಳದಿದ್ದಲ್ಲಿ ಸಂಪರ್ಕಗಳನ್ನು ಕಡಿತಗೊಳಿಸಲಾಗುವುದೇ ; (ವಿವರ ನೀಡುವುದು)

(ಉ) ಲೋಡ್‌ಶೆಡ್ಡಿಂಗ್, ವಿದ್ಯುತ್ ಖೋತಾದಿಂದಾಗಿ ಗ್ರಾಮೀಣ ಭಾಗದ ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ವಿತರಣೆ ಮಾಡದಿರುವ ಕುರಿತು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ನಂಜನಗೂಡು ಶ್ರೀ ನಂಜುಂಡೇಶ್ವರ ಸ್ವಾಮಿ ದೇವಸ್ಥಾನದ ಸುತ್ತ ಶುಚಿತ್ವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪೮ (೨೦೧೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ನಂಜನಗೂಡು ಶ್ರೀ ನಂಜುಂಡೇಶ್ವರ ಸ್ವಾಮಿ ದೇವಸ್ಥಾನದ ಸುತ್ತ ಮುತ್ತಲ ಪ್ರದೇಶವು ಕೊಳಚೆ ಮತ್ತು ಅಶುಚಿತ್ವದಿಂದ ಕೂಡಿದ್ದು, ಭಕ್ತಾಧಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಶ್ರೀ ನಂಜುಂಡೇಶ್ವರ ಸ್ವಾಮಿ ದೇವಸ್ಥಾನಕ್ಕೆ ಸಾಕಷ್ಟು ಆದಾಯವಿದ್ದರೂ ಮುಜರಾಯಿ ಇಲಾಖೆ ಅಧಿಕಾರಿಗಳು ಸ್ವಚ್ಛತೆಯನ್ನು ಕಾಪಾಡಲು ವಿಫಲರಾಗಿದ್ದು ಸರ್ಕಾರ ಇವರ ವಿರುದ್ಧ ಕೈಗೊಂಡ ಕ್ರಮವೇನು ;

(ಇ) ಶ್ರೀ ನಂಜುಂಡೇಶ್ವರ ಸ್ವಾಮಿ ಸನ್ನಿಧಿಗೆ ಬರುವ ಭಕ್ತಾಧಿಗಳ ಅನುಕೂಲಕ್ಕಾಗಿ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಂಡಿದೆ ; (ಪೂರ್ಣ ಮಾಹಿತಿ ನೀಡುವುದು)

(ಈ) ನಂಜನಗೂಡು ಪುರಸಭೆ ವತಿಯಿಂದ ಈ ಪ್ರದೇಶದಲ್ಲಿ ಸ್ವಚ್ಛತೆಯನ್ನು ಕಾಪಾಡುವ ದೃಷ್ಟಿಯಿಂದ ಕೈಗೊಳ್ಳಲಾಗಿರುವ ಕ್ರಮಗಳೇನು ?

## ಬೆಂಗಳೂರು ಮೈಸೂರು ರಾಷ್ಟ್ರೀಯ ಹೆದ್ದಾರಿ (NH) ಅನುಷ್ಠಾನದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೪೯ (೧೪೧೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ (NH) ಅನುಷ್ಠಾನಗೊಳಿಸಲು ಕೇಂದ್ರ-ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಆ) ಈ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಅನುಮೋದನೆಯಾಗಿದ್ದರೂ ಇದುವರೆವಿಗೂ ಅನುಷ್ಠಾನಗೊಳಿಸದಿರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಿ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಮಡಿಕೇರಿ–ಮಂಗಳೂರು ರಸ್ತೆಯಲ್ಲಿ ಟೋಲ್ ಸಂಗ್ರಹ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೫೦ (೧೪೧೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಡಿಕೇರಿ ಮಂಗಳೂರು ರಸ್ತೆಯಲ್ಲಿ ಬಿಸಿ ರೋಡ್‌ನಲ್ಲಿ ಟೋಲ್ ಸಂಗ್ರಹ ಮಾಡಲಾಗುತ್ತಿದೆಯೇ ;

(ಆ) ಟೋಲ್ ಸಂಗ್ರಹಿಸುತ್ತಿರುವ ಕಂಪನಿ ಯಾವುದು ; ರಸ್ತೆಯ ನಿರ್ಮಾಣಕ್ಕಾಗಿ ವ್ಯಯಿಸಿದ ಹಣವೆಷ್ಟು ; ನಿಗಧಿ ಪಡಿಸಲಾದ ಶುಲ್ಕವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈವರೆಗೆ ಟೋಲ್ ಸಂಗ್ರಹಿಸಿದ ಒಟ್ಟು ಮೊತ್ತವೆಷ್ಟು ; ಯಾವ ಅವಧಿಯವರೆಗೆ ಸರ್ಕಾರ ಟೋಲ್ ಸಂಗ್ರಹ ಮಾಡಲು ಅನುಮತಿ ನೀಡಲಾಗಿದೆ ?

## ಹಾಸನ ವರ್ತುಲ ರಸ್ತೆ ಕಾಮಗಾರಿ ಪೂರ್ಣಗೊಳಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೫೧ (೧೪೨೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನದ ವರ್ತುಲ ರಸ್ತೆಯನ್ನು ಸಾಲಗಾಮೆ ರಸ್ತೆಯಿಂದ ಬೇಲೂರು ರಸ್ತೆಗೆ ಸಂಪರ್ಕಿಸಲು ಅವಶ್ಯಕವಿರುವ ಭೂಸ್ವಾಧೀನಕ್ಕೆ ನಿಯಮಾನುಸಾರ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಹಾಸನ ವರ್ತುಲ ರಸ್ತೆ ನಿರ್ಮಾಣಕ್ಕೆ ಭೂಸ್ವಾಧೀನ ಪಡಿಸಿಕೊಳ್ಳಲು ಮಂಜೂರಾದ ಹಣವೆಷ್ಟು ; ರೈತರಿಗೆ ನೀಡಿರುವ ಪರಿಹಾರ ಹಣವೆಷ್ಟು ;

(ಇ) ಹಾಸನದ ವರ್ತುಲ ರಸ್ತೆಯನ್ನು ಸಾಲಗಾಮೆ ರಸ್ತೆಯಿಂದ ಬೇಲೂರು ರಸ್ತೆಗೆ ಸಂಪರ್ಕಿಸುವ ರಸ್ತೆ ನಿರ್ಮಿಸಲು ಮಂಜೂರಾಗಿರುವ ಹಣವೆಷ್ಟು ; ಕಾಮಗಾರಿ ಯಾವ ಹಂತದಲ್ಲಿರುತ್ತದೆ ?

## ಕಳಪೆ ಗುಣಮಟ್ಟದ ಆಲೂಗೆಡ್ಡೆ ಬೀಜ ಬಿತ್ತನೆಯಿಂದ, ಭೂಮಿಯಲ್ಲೆ ಕೊಳೆತ ಆಲೂಗೆಡ್ಡೆ ಬೆಳೆ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೫೨ (೧೪೧೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸಕ್ತ ಹಂಗಾಮಿನಲ್ಲಿ ಹಾಸನ ಜಿಲ್ಲೆಯಲ್ಲಿ ಮಾರಾಟವಾದ ಆಲೂಗೆಡ್ಡೆ ಬೀಜವೆಷ್ಟು ; ಈ ಪೈಕಿ ದೃಢೀಕೃತ ಬೀಜವೆಷ್ಟು ;

(ಆ) ಹಾಸನ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾದ ಆಲೂಗೆಡ್ಡೆ ಎಷ್ಟು ; ಈ ಪೈಕಿ ಭೂಮಿಯಲ್ಲೆ ಕರಗಿ ಹೋಗಿರುವ ಪ್ರಮಾಣವೆಷ್ಟು ;

(ಇ) ತೋಟಗಾರಿಕೆ ಇಲಾಖೆಯವರು ಎಲ್ಲಾ ಆಲೂ ಬಿತ್ತನೆ ಬೀಜಗಳನ್ನು ಪರಿಶೀಲಿಸಿ ನಂತರ ರೈತರಿಗೆ ಮಾರಾಟ ಮಾಡಲಾಗಿದೆಯೇ ;

(ಈ) ದೃಢೀಕೃತ ಆಲೂಗೆಡ್ಡೆ ಬಿತ್ತನೆ ಬೀಜವನ್ನು ರೈತರಿಗೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ನಷ್ಟಕ್ಕೊಳಗಾಗಿರುವ ಆಲೂಗೆಡ್ಡೆ ಬೆಳಗಾರರಿಗೆ ಪರಿಹಾರ ಮತ್ತು ವಿಮೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ವಿಶ್ವಭಾರತಿ ಗೃಹ ನಿರ್ಮಾಣ ಸಹಕಾರ ಸಂಘದ ನಿವೇಶನ ಹಂಚಿಕೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೩ (೧೯೪೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವಭಾರತಿ ಗೃಹ ನಿರ್ಮಾಣ ಸಹಕಾರ ಸಂಘ ಪ್ರಾರಂಭವಾಗಿದ್ದು ಯಾವಾಗ ; ಇದರಲ್ಲಿನ ಸದಸ್ಯರ ಸಂಖ್ಯೆ ಎಷ್ಟು ; (ಸದಸ್ಯರ ನೋಂದಣಿ ದಿನಾಂಕ, ನೋಂದಣಿ ಶುಲ್ಕ, ಸದಸ್ಯರ ಹೆಸರು ಹಾಗೂ ವಿಳಾಸ ಸೇರಿದಂತೆ ಪ್ರತ್ಯೇಕ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಸದಸ್ಯರು ಸಹ ಸದಸ್ಯರು ಸೇರಿದಂತೆ ಈ ಗೃಹ ನಿರ್ಮಾಣ ಸಹಕಾರ ಸಂಘದ ಮೂಲಕ ಇದುವರೆವಿಗೆ ರಚಿಸಲಾದ ನಿವೇಶನಗಳ ಸಂಖ್ಯೆ ಎಷ್ಟು ; ಎಷ್ಟು ಮಂದಿಗೆ ನಿವೇಶನ ಹಂಚಿಕೆ ಮಾಡಲಾಗಿದೆ ; ನಿವೇಶನ ಪಡೆದವರ ಸಂಖ್ಯೆ ಎಷ್ಟು ; (ಪೂರ್ಣ ವಿಳಾಸದೊಂದಿಗೆ ನಿವೇಶನ ವಿಸ್ತೀರ್ಣ, ನಿವೇಶನ ಹಂಚಿಕೆಗೆ ನಿಗಧಿಪಡಿಸಿ ಪಾವತಿಸಿಕೊಂಡ ಹಣ ಕುರಿತು ಸಂಪೂರ್ಣ ವಿವರ ಒದಗಿಸುವುದು)

(ಇ) ನಿವೇಶನ ಹಂಚಿಕೆಯಲ್ಲಿ ಸದಸ್ಯರ ನೋಂದಣಿ ಹಿರಿತನವನ್ನು ಪರಿಗಣಿಸಲಾಗಿದೆಯೇ ;

(ಈ) ನೋಂದಣಿ ಹಿರಿತನ ಕಡೆಗಣಿಸಿ ಅಕ್ರಮವೆಸಗಿರುವುದು ನಿಜವೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ಒದಗಿಸುವುದು)

## ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ ನಡೆದ ಅವ್ಯವಹಾರಗಳು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೫೪ (೧೪೨೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಲ್ಲಿ ಯಾವ ಯಾವ ಅಧಿಕಾರಿಗಳ ಅರೆನ್ಯಾಯಿಕ ವ್ಯಾಪ್ತಿಯಲ್ಲಿ ಯಾವ ಯಾವ ಗೃಹ ನಿರ್ಮಾಣ ಸಹಕಾರ ಸಂಘಗಳ ಅವ್ಯವಹಾರ ಹಾಗೂ ಅನ್ಯಾಯದ ವಿರುದ್ಧ ಪ್ರಕರಣಗಳು ದಾಖಲಾಗಿವೆ ; ಅವುಗಳಲ್ಲಿ ವಿಲೇವಾರಿಯಾಗಿರುವ ಹಾಗೂ ಬಾಕಿ ಇಟ್ಟುಕೊಂಡಿರುವ ಪ್ರಕರಣಗಳು ಎಷ್ಟು ; ಅವು ಯಾವುವು ;

(ಆ) ಈ ಅಧಿಕಾರಿಗಳ ವ್ಯಾಪಕ ಭ್ರಷ್ಟಾಚಾರದಿಂದಾಗಿ ೪-೫ ವರ್ಷಗಳಾದರೂ ಈ ಪ್ರಕರಣಗಳನ್ನು ವಿಲೇವಾರಿ ಮಾಡದೆ ಬಾಕಿ ಇಟ್ಟುಕೊಳ್ಳುತ್ತಿದ್ದು, ಇದನ್ನು ತಪ್ಪಿಸಲು ಗರಿಷ್ಠ ೨ ವರ್ಷದೊಳಗೆ ವಿಲೇವಾರಿ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳು ಯಾವುವು ;

(ಇ) ಮಲ್ಲೇಶ್ವರ ಉಪ ನಿಬಂಧಕರ ಅರೆನ್ಯಾಯಿಕ ಕಛೇರಿಯಲ್ಲಿ ಕಳೆದ ೫ ವರ್ಷದಿಂದ ದಾಖಲಾಗಿ ಬಾಕಿ ಇರುವ ಪ್ರಕರಣಗಳೆಷ್ಟು ; ವರ್ಷಾವಾರು ಮಾಹಿತಿ ನೀಡುವುದು ; ಈ ವ್ಯಾಜ್ಯಗಳನ್ನು ದಾಖಲಿಸಿದ ಎರಡು ವರ್ಷದೊಳಗೆ ವಿಲೇವಾರಿ ಮಾಡಲು ಕೈಗೊಳ್ಳುವ ಕ್ರಮಗಳೇನು ;

(ಈ) ಈ ಅರೆ ನ್ಯಾಯಿಕ ಪ್ರಾಧಿಕಾರಗಳ ಉದ್ದೇಶಪೂರ್ವಕ ವಿಳಂಬದಿಂದ ಸದಸ್ಯರಿಗೆ ಅನ್ಯಾಯವಾಗುತ್ತಿರುವುದರಿಂದ

ಇವುಗಳನ್ನು ಕೂಡಲೇ ರದ್ದುಪಡಿಸಿ, ಅನ್ಯಾಯಕ್ಕೊಳಗಾದವರು ನೇರವಾಗಿ ಕೆ.ಎ.ಟಿ.ಗೆ ವ್ಯಾಜ್ಯ ಹೂಡುವಂತೆ ನಿಯಮ ತಿದ್ದುಪಡಿ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ; ಇಲ್ಲವಾದಲ್ಲಿ ಪರ್ಯಾಯ ಕ್ರಮಗಳಾವುವು ?

## ನಿಪ್ಪಾಣಿ ಮತ್ತು ಗೋಕಾಕ್ ನಗರಸಭೆಗಳಲ್ಲಿಯ ಘನ ತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೧೫೫೫ (೨೦೧೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯ ದೊಡ್ಡ ನಗರಸಭೆಗಳಾಗಿರುವ ನಿಪ್ಪಾಣಿ ಮತ್ತು ಗೋಕಾಕ ನಗರಸಭೆಗಳಲ್ಲಿಯ ಘನ ತ್ಯಾಜ್ಯ ನಿರ್ವಹಣೆ ಸರಿಯಾಗಿ ಆಗದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಎರಡು ನಗರಸಭೆಗಳಲ್ಲಿ ಮಂಜೂರಾಗಿರುವ ಪೌರ ಕಾರ್ಮಿಕರ ಹುದ್ದೆಗಳೆಷ್ಟು ; ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ;

(ಇ) ಇಲ್ಲಿಯ ಘನ ತ್ಯಾಜ್ಯ ನಿರ್ವಹಣೆಯನ್ನು ಖಾಸಗಿಯವರು ನಿರ್ವಹಿಸುತ್ತಿದ್ದರೆ ಅದಕ್ಕೆ ತಗಲುತ್ತಿರುವ ವೆಚ್ಚ ಎಷ್ಟು ; ಘನ

ತ್ಯಾಜ್ಯ ನಿರ್ವಹಣೆ ವೆಚ್ಚವನ್ನು ಹೆಚ್ಚಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಈ) UYSSDMT ಯೋಜನೆಯಡಿ ನಗರ ಸಭೆಗಳಲ್ಲಿ ಯು.ಜಿ.ಡಿ. ಅಳವಡಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ?

## ನಂಜನಗೂಡು ಪುರಸಭೆಯನ್ನು ನಗರಸಭೆಯಾಗಿ ಪರಿವರ್ತಿಸುವುದು.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫೬ (೧೪೨೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ಜನಗಣತಿಯಂತೆ ನಂಜನಗೂಡು ಪಟ್ಟಣದ ಜನಸಂಖ್ಯೆ ಎಷ್ಟು ; ನಂಜನಗೂಡು ಪಟ್ಟಣದ ಮತದಾರರ ಸಂಖ್ಯೆ ಎಷ್ಟು ; ನಂಜನಗೂಡು ಪಟ್ಟಣದಲ್ಲಿರುವ ವಾರ್ಡ್‌ಗಳ ಸಂಖ್ಯೆ ಎಷ್ಟು ;

(ಆ) ನಂಜನಗೂಡು ಪುರಸಭೆಯನ್ನು ನಗರಸಭೆಯನ್ನಾಗಿ ಪರಿವರ್ತಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ನಂಜನಗೂಡು ಪಟ್ಟಣದ ವ್ಯಾಪ್ತಿಯನ್ನು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿಸಿದ್ದು ; ನಂಜನಗೂಡು ಪಟ್ಟಣವನ್ನು ನಗರಸಭೆಯಾಗಿ ಪರಿವರ್ತಿಸಲು ಇರುವ ಅಡೆತಡೆಗಳೇನು ?

## ರಾಜ್ಯದಲ್ಲಿ ಸಕ್ಕರೆ ಉತ್ಪಾದನೆ ಕುರಿತು.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):-**

೧೫೫೭(೧೪೩೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸಕ್ಕರೆ ಉತ್ಪಾದನೆಯ ಪ್ರಮಾಣ ಎಷ್ಟು ; ಇತ್ತೀಚೆಗೆ ಈ ಸಕ್ಕರೆ ಉತ್ಪಾದನೆಯು ಹೆಚ್ಚಾಗಿರುವುದು ನಿಜವೇ ; ಇದಕ್ಕೆ ಕಾರಣಗಳೇನು ;

(ಆ) ಉತ್ಪಾದನೆ ಕಾರಣ ಸಕ್ಕರೆ ಬೆಲೆ ಅಗ್ಗವಾಗಿರುವುದೆಂದು ಸರ್ಕಾರ ಭಾವಿಸುವುದೇ ; ಹಾಗಿದ್ದಲ್ಲಿ, ಸಕ್ಕರೆಯ ಬೆಲೆಯು ಕಡಿಮೆಯಾಗಿ ಗ್ರಾಹಕರಿಗೆ ಲಭ್ಯವಾಗದಿರುವುದು ನಿಜವೇ ; ಇದಕ್ಕೆ ಕಾರಣವೇನು ;

(ಇ) ಮಾರುಕಟ್ಟೆಯಲ್ಲಿ ಸಕ್ಕರೆ ಬೆಲೆಯನ್ನು ನಿಯಂತ್ರಣದಲ್ಲಿಡಲು ಹಾಗೂ ಬೆಲೆ ಸ್ಥಿರೀಕರಣಕ್ಕೆ ಸರ್ಕಾರ ಮುಂದಾಗುವುದೇ ;

(ಈ) ಇದರ ಜೊತೆಗೆ ಪಡಿತರಕ್ಕೆ ಅಗತ್ಯವಿರುವ ಸಕ್ಕರೆಯನ್ನು ಸರ್ಕಾರಿ ದರದಲ್ಲಿ ಖರೀದಿ ಮಾಡಲು ಹಾಗೂ ಮುಕ್ತ ಮಾರುಕಟ್ಟೆ ವ್ಯವಸ್ಥೆಯಲ್ಲಿ ಸಗಟು ಮಾರಾಟದ ಕಡಿಮೆ ಬೆಲೆಗೆ ಸಕ್ಕರೆ ಸಿಗುವಂತೆ ಮಾಡಲು ಇರುವ ತೊಂದರೆಗಳೇನು ;

(ಉ) ಹಾಲಿ ದರವು ಕಳೆದ ೨ ವರ್ಷಕ್ಕೆ ಹೋಲಿಸಿದರೆ ವ್ಯತ್ಯಾಸವಾಗಿರುವುದು ನಿಜವೇ ; ಹಾಗಿದ್ದಲ್ಲಿ, ಅದರ ಲಾಭ ಗ್ರಾಹಕರಿಗೆ ಸಿಗಬೇಕಲ್ಲವೇ ? (ವಿವರ ಒದಗಿಸುವುದು)

## ಬೆಳೆಗಳಿಗೆ ಬೆಂಬಲ ಬೆಲೆ ಕುರಿತು.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ ಮತ್ತು ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು):-**

೧೫೫೮ (೧೪೧೪+೧೪೨೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆಯನ್ನು ಸರ್ಕಾರ ಘೋಷಿಸಿದೆ ; (ಬೆಳೆವಾರು ಬೆಂಬಲ ಬೆಲೆ ವಿವರ ಒದಗಿಸುವುದು)

(ಆ) ಸದರಿ ಬೆಂಬಲ ಬೆಲೆಯನ್ನು ಸರ್ಕಾರ ಪ್ರಸ್ತುತ ಪರಿಷ್ಕರಿಸಲು ನಿರ್ಧರಿಸಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಇ) ಬೆಳೆಗೆ ಸಮರ್ಪಕ ಬೆಲೆಯಿಲ್ಲದೆ ರೈತರು ಹಾಗೂ ವ್ಯಾಪಾರಿಗಳು ದಾಸ್ತಾನು ಮಾಡಿದ ಬೆಳೆಗಳು, ಇಲಿಗಳ ಮತ್ತು ಇತರೇ ಪ್ರಾಣಿಗಳಿಂದ ಹಾಳಾಗಿರುವ ಪ್ರಕರಣಗಳು ಬೆಳಕಿಗೆ ಬಂದಿವೆಯೇ ; ಇದಕ್ಕೆ ಕಾರಣಗಳೇನು ; ಇದಕ್ಕೆ ಸೂಕ್ತ ಪರಿಹಾರೋಪಾಯಗಳನ್ನು ಸರ್ಕಾರ ನೀಡುವುದೇ ;

(ಈ) ಈ ನಷ್ಟವನ್ನು ಭರಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ;

(ಉ) ಕೆಲ ಭಾಗದಲ್ಲಿ ರೈತ ಖರೀದಿ ಕೇಂದ್ರಗಳಿಗೆ ರೈತರು ದಾಸ್ತಾನು ತರದಿರುವುದರ ಪರಿಣಾಮಗಳೇನು ? (ವಿವರ ನೀಡುವುದು)

## ಸಕ್ಕರೆ ಕಾರ್ಖಾನೆಗಳಲ್ಲಿ ತಯಾರಾಗುವ ಎಥನಾಲ್ ಸ್ಪಿರಿಟ್ ಬಗ್ಗೆ.

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೫೫೯ (೧೯೪೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳಲ್ಲಿ ಉತ್ಪತ್ತಿಯಾಗುವ ಸ್ಪಿರಿಟ್‌ನಿಂದ ಸರ್ಕಾರಕ್ಕೆ ಬರುವ ಆದಾಯವೆಷ್ಟು ;

(ಆ) ರಾಜ್ಯದಲ್ಲಿರುವ ಎಷ್ಟು ಕಂಪನಿಗಳಲ್ಲಿ ಎಥನಾಲ್ ಸ್ಪಿರಿಟ್ ಉತ್ಪತ್ತಿ ಮಾಡುತ್ತಿದ್ದಾರೆ ; (ಕಂಪನಿವಾರು ವಿವರ ನೀಡುವುದು)

(ಇ) ಕಳೆದ ३ ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಲಾಭದ ಪ್ರಮಾಣ ವೆಷ್ಟು ?

## ಉತ್ತರ ಕರ್ನಾಟಕಕ್ಕೆ ಶೇಕಡ ೪೦ರಷ್ಟು ವಿದ್ಯುತ್ತನ್ನು ಮೀಸಲಿಡುವ ಬಗ್ಗೆ.

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೫೬೦(೧೯೫೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ;

(ಆ) ಉತ್ಪಾದಿಸಲಾಗುತ್ತಿರುವ ವಿದ್ಯುತ್‌ನಲ್ಲಿ ದಕ್ಷಿಣ ಕರ್ನಾಟಕ ಮತ್ತು ಉತ್ತರ ಕರ್ನಾಟಕಕ್ಕೆ ಹಂಚಿಕೆ ಮಾಡಲಾಗುತ್ತಿರುವ ವಿದ್ಯುತ್ ಪ್ರಮಾಣವೆಷ್ಟು ;

(ಇ) ಈ ರೀತಿ ಹಂಚಿಕೆ ಮಾಡುವಲ್ಲಿ ಅನುಸರಿಸಲಾಗುತ್ತಿರುವ ಆಧಾರಾಂಶಗಳೇನು ;

(ಈ) ಡಾ.ನಂಜುಂಡಪ್ಪ ವರದಿ ಪ್ರಕಾರ ಶೇಕಡ ೪೦ ರಷ್ಟು ವಿದ್ಯುತ್‌ನ್ನು ಉತ್ತರ ಕರ್ನಾಟಕಕ್ಕೆ ಮೀಸಲಿಡಲಾಗುತ್ತಿದೆಯೇ ;

(ಉ) ಇಲ್ಲವಾದಲ್ಲಿ ಯಾವಾಗ ಈ ಬಗ್ಗೆ ಕ್ರಮಗಳನ್ನು ಕೈಗೊಳ್ಳಲಾಗುವುದು ?

**ಖಾದಿ ಸಹಕಾರಿ ಸಂಘಗಳನ್ನು ಪುನಃಶ್ಚೇತನಗೊಳಿಸುವ ಬಗ್ಗೆ.**

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೬೧ (೧೯೫೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾದಿ ಉತ್ಪಾದಿಸುವ ಸಹಕಾರಿ ಸಂಘಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಸಂಘಗಳ ಪೈಕಿ ಎಷ್ಟು ಸಂಘಗಳು ಲಾಭದಲ್ಲಿವೆ ಎಷ್ಟು ಸಂಘಗಳು ನಷ್ಟದಲ್ಲಿವೆ ;

(ಇ) ಸಂಘಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ಮತ್ತು ಪುರುಷ ಕಾರ್ಮಿಕರ ಸಂಖ್ಯೆ ಎಷ್ಟು ;

(ಈ) ಆರ್ಥಿಕ ಸಂಕಷ್ಟಗಳಿಂದ ನರಳುತ್ತಿರುವ ಖಾದಿ ಸಹಕಾರಿ ಸಂಘಗಳನ್ನು ಪುನಃಶ್ಚೇತನಗೊಳಿಸಲು ಮತ್ತು ಈ ಸಂಘಗಳಲ್ಲಿನ ಕಾರ್ಮಿಕರ ಹಿತರಕ್ಷಿಸುವ ನಿಟ್ಟಿನಲ್ಲಿ ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಳ್ಳುತ್ತಿವೆ ?

## ಕಬ್ಬಿನಿಂದ ಇಥೆನಾಲ್ ಉತ್ಪಾದನೆಗೆ ಪ್ರೋತ್ಸಾಹಿಸುವ ಕುರಿತು.

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೫೬೨ (೨೦೧೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಸಹಕಾರ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಲಾಭದಲ್ಲಿರುವ ಮತ್ತು ನಷ್ಟದಲ್ಲಿರುವ ಸಹಕಾರ ಸಕ್ಕರೆ ಕಾರ್ಖಾನೆಗಳ ವಿವರಗಳನ್ನು ನೀಡುವುದು ;

(ಆ) ಕಬ್ಬಿನಿಂದ ಸಕ್ಕರೆ ಹೊರತುಪಡಿಸಿ ಬೇರೆ ಯಾವ ಯಾವ ಲಾಭದಾಯಕ ಉತ್ಪನ್ನಗಳನ್ನು ಪಡೆಯಬಹುದಾಗಿದೆ ;

(ಇ) ಕಬ್ಬಿನಿಂದ ಇಥೆನಾಲ್ ಉತ್ಪಾದಿಸಲು ಪ್ರೋತ್ಸಾಹಿಸಲಾಗುವುದೇ ;

(ಈ) ಕಬ್ಬು ಬೆಳೆಯುವ ರೈತರಿಗೆ ಉತ್ತೇಜನ ನೀಡಲು ಮಹಾನಗರಗಳಲ್ಲಿ ಕೆ.ಎಂ.ಎಫ್ ಹಾಲಿನ ಕೇಂದ್ರಗಳಂತೆ ತಾಜಾ ಕಬ್ಬಿನ ಹಾಲನ್ನು ಆರೋಗ್ಯಕರ ರೀತಿಯಲ್ಲಿ ತಯಾರಿಸಿ ಮಾರಾಟ ಮಾಡುವ ಕೇಂದ್ರಗಳ ಸ್ಥಾಪನೆಗೆ ಉತ್ತೇಜನ ನೀಡಲಾಗುವುದೇ ?

## ರಾಜ್ಯದಲ್ಲಿ ತೋಟಗಾರಿಕೆ ಸಂಸ್ಕರಣಾ ಘಟಕಗಳನ್ನು ಹೆಚ್ಚಿಸುವುದು.

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೫೬೩ (೨೦೧೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಕೃಷಿ ಮತ್ತು ತೋಟಗಾರಿಕೆ ಸಂಸ್ಕರಣಾ ಘಟಕಗಳ ಸಂಖ್ಯೆ ಎಷ್ಟು ; ಅವುಗಳು ಯಾವ ಯಾವ ಸ್ಥಳಗಳಲ್ಲಿವೆ ;

(ಆ) ಕೃಷಿ ಸಂಸ್ಕರಣಾ ಘಟಕಗಳ ಕೊರತೆಯಿಂದಾಗಿ ಸಾಕಷ್ಟು ತೋಟಗಾರಿಕಾ ಉತ್ಪನ್ನಗಳು ಕೊಳೆತುಹೋಗಿ ರೈತರು ಸಂಕಷ್ಟಕೊಳಗಾಗುತ್ತಿರುವುದನ್ನು ತಪ್ಪಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಉತ್ತರ ಕರ್ನಾಟಕದಲ್ಲಿ ಹೆಚ್ಚಿನ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು, ತೋಟಗಾರಿಕೆ ಉತ್ಪನ್ನಗಳನ್ನು ರಫ್ತು ಮಾಡಲು ಉತ್ತೇಜನ ನೀಡಲಾಗುವುದೆ ?

## ಮಾವು ಮಂಡಳಿಯನ್ನು ಸ್ಥಾಪಿಸುವ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೫೬೪(೧೯೫೫) ಮಾನ್ಯ ಕೃಷಿಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಮಾವು ಮಂಡಳಿ ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ; ಇದರ ಕೇಂದ್ರಸ್ಥಾನ ಯಾವುದು ;

(ಆ) ಈ ಮಂಡಳಿಯ ಸದಸ್ಯರು ಯಾರು ; ಸದಸ್ಯರ ಪಟ್ಟಿ ನೀಡುವುದು ;

(ಇ) ಅಧಿಕಾರೇತರ ಸದಸ್ಯರು ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮಾವು ಮಂಡಳಿಯ ರೂಪುರೇಷಗಳು ಹಾಗೂ ಕಾರ್ಯವ್ಯಾಪ್ತಿ ಏನು ; ಇದರಿಂದ ರೈತರಿಗಾಗುವ ಪ್ರಯೋಜನೆಗಳೇನು ;

(ಉ) ಇದುವರೆಗೂ ಎಷ್ಟು ಮೊತ್ತದ ಹಣವನ್ನು ಈ ಮಂಡಳಿಯ ಮುಖಾಂತರ ರೈತರ ಉಪಯೋಗಕ್ಕಾಗಿ ವಿನಿಯೋಗಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಊ) ರಾಜ್ಯದಲ್ಲಿ ಮಾವಿನ ಬೆಳೆಯನ್ನು ಕೋಲಾರ ಜಿಲ್ಲೆಯ, ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಬೆಳೆಯುವುದರಿಂದ ಈ ಮಾವು ಮಂಡಳಿಯನ್ನು ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಹೊಗಳಗೆರೆ, ತೋಟಗಾರಿಕಾ ಕೇಂದ್ರಕ್ಕೆ ಸ್ಥಳಾಂತರಿಸಲು ಸರ್ಕಾರ ಯೋಚಿಸಿದೆಯೇ ? (ಮಾಹಿತಿ ನೀಡುವುದು)

## ಹಾಪ್‌ಕಾಮ್ಸ್ ಮಳಿಗೆಗಳ ಕುರುತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೫೬೫ (೧೯೫೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹಾಪ್‌ಕಾಮ್ಸ್ ಮಳಿಗೆಗಳ ಸಂಖ್ಯೆ ಎಷ್ಟು ;

(ಆ) ಈ ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಸರಿಯಾಗಿ ಚುನಾವಣೆ ನಡೆಸಲಾಗುತ್ತಿದೆಯೇ ;

(ಇ) ಚುನಾವಣೆಯಲ್ಲಿ ಸ್ಪರ್ಧಿಸಲು ಎಲ್ಲಾ ರೈತರಿಗೆ ಅವಕಾಶ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಕಾನೂನು ತಿದ್ದುಪಡಿ ಮಾಡಲು ಸರ್ಕಾರ ಚಿಂತಿಸಿದೆಯೇ ?

## ವಿದ್ಯುತ್ ಅಭಾವದ ಹಿನ್ನೆಲೆಯಲ್ಲಿ ಸೋಲಾರ್ ಪಾರ್ಕ್‌ಗಳ ಸ್ಥಾಪನೆ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೫೬೬ (೧೯೫೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವಿದ್ಯುತ್ ಅಭಾವದ ಹಿನ್ನೆಲೆಯಲ್ಲಿ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಪ್ರತಿ ಜಿಲ್ಲೆಯಲ್ಲಿ ಸೋಲಾರ್ ಪಾರ್ಕ್‌ಗಳನ್ನು ಸ್ಥಾಪಿಸಿ ವಿದ್ಯುಚ್ಛಕ್ತಿ ಉತ್ಪಾದಿಸುವ ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆಯೇ ; ಹಾಗಿದ್ದಲ್ಲಿ, ತತ್ಸಂಬಂಧ ಸರ್ಕಾರವು ರೂಪಿಸಿರುವ ಯೋಜನೆಗಳೇನು ; (ವಿವರ ಒದಗಿಸುವುದು)

(ಇ) ಇವುಗಳ ಅನುಷ್ಠಾನಕ್ಕೆ ಅಂದಾಜಿಸಿದ ವೆಚ್ಚ ಎಷ್ಟು ; ಅದನ್ನು ಯಾವ ಮೂಲದಿಂದ ಭರಿಸಲು ಉದ್ದೇಶಿಸಲಾಗಿದೆ ? (ವಿವರ ಒದಗಿಸುವುದು)

## ಪ್ರವಾಸಿ ಮಂದಿರ ಹಾಗೂ ಅತಿಥಿ ಗೃಹಗಳ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೫೬೭ (೧೯೫೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಲೋಕೋಪಯೋಗಿ ಇಲಾಖಾ ವ್ಯಾಪ್ತಿಯ ಅಧೀನದಲ್ಲಿರುವ ಪ್ರವಾಸಿ ಮಂದಿರ ಹಾಗೂ ಅತಿಥಿ ಗೃಹಗಳೆಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೋಲಾರ ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಇನ್ನೂ ಹಳೆ ಪ್ರವಾಸಿ ಮಂದಿರ ಹಾಗೂ ಅತಿಥಿ ಗೃಹಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಕೋಲಾರ ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಯಾವ-ಯಾವ ತಾಲ್ಲೂಕುಗಳಲ್ಲಿ ಹೊಸದಾಗಿ ಪ್ರವಾಸಿ ಮಂದಿರ ಹಾಗೂ ಅತಿಥಿ ಗೃಹಗಳನ್ನು ನಿರ್ಮಿಸಲು ಸರ್ಕಾರ ಯೋಚಿಸಿದೆ ? (ವಿವರ ನೀಡುವುದು)

**ರಾಜ್ಯ ಹೆದ್ದಾರಿ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಯೋಜನೆ ಕುರಿತು.**

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೫೬೮(೧೯೫೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಹೆದ್ದಾರಿ ರಸ್ತೆಗಳನ್ನು ಅಭಿವೃದ್ಧಿ ಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ರಾಜ್ಯದ ಯಾವ ಯಾವ ರಸ್ತೆಗಳಲ್ಲಿ ಯಾವ ಯಾವ ಭಾಗಗಳನ್ನು ಈ ಯೋಜನೆಯಲ್ಲಿ ಸೇರಿಸಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಎಂ.ಡಿ.ಆರ್. ರಸ್ತೆಗಳನ್ನು ಲೋಕೋಪಯೋಗಿ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದೇ ; ಹಾಗಿದ್ದಲ್ಲಿ, ಕೋಲಾರ-ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಯಾವ ಯಾವ ಎಂ.ಡಿ.ಆರ್. ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗುವುದು ?

## ರಾಜ್ಯದ ವಿದ್ಯುತ್ ಬೇಡಿಕೆಯ ಪ್ರಮಾಣ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೫೭೯ (೧೯೬೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಒಟ್ಟು ವಿದ್ಯುತ್ ಬೇಡಿಕೆಯ ಪ್ರಮಾಣವೆಷ್ಟು ; ಇದರಲ್ಲಿ ಜಲ ವಿದ್ಯುತ್ , ವಿಂಡ್ ಪವರ್, ಥರ್ಮಲ್ ಪವರ್ ಮತ್ತು ಸೌರ ಶಕ್ತಿಯಿಂದ ಉತ್ಪಾದಿಸುವ ವಿದ್ಯುತ್ ಪ್ರಮಾಣವನ್ನು ತಿಳಿಸುವುದು ;

(ಆ) ರಾಜ್ಯದ ಸೌರಶಕ್ತಿಯ ಉತ್ಪಾದನೆಯನ್ನು ಹೆಚ್ಚಿಸಲು ಸಕಾರ ಏನು ಕ್ರಮ ಕೈಗೊಂಡಿದೆ ;

(ಇ) ಸೌರಶಕ್ತಿಯ ಉತ್ಪಾದನೆ ಮತ್ತು ಬಳಕೆಗಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಸುವರ್ಣ ವಿಧಾನಸೌಧದ ನಿರ್ಮಾಣದ ಹಾಗೂ ಕಟ್ಟಡದ ಉಪಯೋಗದ ಕುರಿತು.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೫೮೦ (೧೯೬೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿಯಲ್ಲಿ ನಿರ್ಮಿಸಲಾಗಿರುವ ಸುವರ್ಣ ವಿಧಾನಸೌಧದ ನಿರ್ಮಾಣದ ಒಟ್ಟು ವೆಚ್ಚವೆಷ್ಟು ; ಈ ಕಟ್ಟಡದ ನಿರ್ವಹಣೆಗೆ ಪ್ರತಿ ವರ್ಷ ಮಾಡಲಾಗುವ ಖರ್ಚು ಎಷ್ಟು ;

(ಆ) ಈ ಕಟ್ಟಡವನ್ನು ಅಧಿವೇಶನ ನಡೆಯುವ ಸಂದರ್ಭದಲ್ಲಿ ಮಾತ್ರ ಉಪಯೋಗಿಸುತ್ತಿದ್ದು, ಇದರ ಸಂಪೂರ್ಣ ಉಪಯೋಗಕ್ಕಾಗಿ ಸರ್ಕಾರ ಏನು ಯೋಜನೆ ಹಾಕಿಕೊಂಡಿದೆ ;

(ಇ) ಯಾವಾಗಿನಿಂದ ಸಂಪೂರ್ಣ ಉಪಯೋಗ ಮಾಡಲಾಗುವುದು ?

## ನಂದಿಗಿರಿಧಾಮದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೫೭೧ (೧೯೬೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಂತರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿಗಳಿಸಿರುವ ನಂದಿಗಿರಿಧಾಮದಲ್ಲಿ ಶುದ್ಧ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಗಿರಿಧಾಮಕ್ಕೆ ರಾಜ್ಯದಿಂದ ಮಾತ್ರವಲ್ಲದೆ ಹೊರ ರಾಜ್ಯ ಮತ್ತು ಹೊರ ದೇಶಗಳಿಂದಲೂ ಸಾವಿರಾರು ಪ್ರವಾಸಿಗರು ಬರುತ್ತಿದ್ದು ಇದರ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ನಂದಿಗಿರಿಧಾಮದಲ್ಲಿ ತೋಟಗಾರಿಕೆ ಇಲಾಖೆಯಿಂದ ಇತ್ತೀಚೆಗೆ ಸೈಕಲ್ ವಿಹಾರವನ್ನು ಪ್ರಾರಂಭ ಮಾಡಿದ್ದು, ರಸ್ತೆಗಳು ಸೈಕಲ್ ವಿಹಾರಕ್ಕೂ ಉಪಯೋಗವಾಗದ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು, ಪ್ರವಾಸಿಗರು ಸೇರಿದಂತೆ ಸ್ಥಳೀಯರು ಹಲವಾರು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ನೀಡಿದ್ದರೂ ಯಾವ ಪ್ರಯೋಜವಾಗದಿರುವ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ರಾಯಚೂರಿನಲ್ಲಿರುವ ಶಾಖೋತ್ಪನ್ನ ಕೇಂದ್ರದ ವಿದ್ಯುತ್ ಉತ್ಪಾದನೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೫೭೨ (೧೯೬೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರಿನಲ್ಲಿರುವ ಶಾಖೋತ್ಪಾನ್ನ ಕೇಂದ್ರದಲ್ಲಿ ವಾರ್ಷಿಕ ಎಷ್ಟು ವಿದ್ಯುತ್ತನ್ನು ಉತ್ಪಾದನೆ ಮಾಡಲಾಗುತ್ತದೆ ;

(ಆ) ಈ ಶಾಖೋತ್ಪನ್ನ ಕೇಂದ್ರಕ್ಕೆ ವಾರ್ಷಿಕ ಎಷ್ಟು ಮೆಟ್ರಿಕ್ ಟನ್ ಕಲ್ಲಿದ್ದಲನ್ನು ಉಪಯೋಗಿಸಲಾಗುತ್ತದೆ ; ಈ ಕಲ್ಲಿದ್ದಲನ್ನು ಯಾವ ಮೂಲದಿಂದ ಖರೀದಿ ಮಾಡಲಾಗುತ್ತಿದೆ ; ಕಲ್ಲಿದ್ದಲನ್ನು ಖರೀದಿ ಮಾಡಲು ಇರುವ ಮಾನದಂಡಗಳೇನು ;

(ಇ) ಈ ಶಾಖೋತ್ಪನ್ನ ಕೇಂದ್ರದಲ್ಲಿ ಉಪಯೋಗಿಸುವ ಕಲ್ಲಿದ್ದಲನ್ನು ವಾಷ್ ಮಾಡಲು ಇರುವ ಮಾನದಂಡಗಳೇನು ;

(ಈ) ಈ ಮಾನದಂಡಗಳನ್ನು ಕಡ್ಡಾಯವಾಗಿ ಅನುಸರಿಸಲಾಗುತ್ತಿದೆಯೇ ?

# ಕೃಷಿ ಚಟುವಟಿಕೆ ಉದ್ದೇಶಗಳಿಗೆ ಮಂಜೂರಾಗಿರುವುದನ್ನು ಕೃಷಿಯೇತರ ಚಟುವಟಿಕೆಗೆ ಬಳಸುತ್ತಿರುವುದು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೫೭೩ (೧೯೬೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕೃಷಿ ಮಾರುಕಟ್ಟೆ ಸಮಿತಿಯ ಜಾಗವನ್ನು ಕೃಷಿ ಚಟುವಟಿಕೆ ಉದ್ದೇಶಗಳಿಗೆ ಬಳಸಲು ಮಂಜೂರಾಗಿರುವುದನ್ನು, ಕೃಷಿಯೇತರ ಚಟುವಟಿಕೆಗೆ ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿರುವ ಕೃಷಿ ಮಾರುಕಟ್ಟೆ ಸಮಿತಿಗಳಾವುವು ; ಈ ಸಮಿತಿಗಳಿಂದ ಲೀವ್ ಅಂಡ್ ಲೈಸನ್ಸ್ ಪದ್ಧತಿಯಡಿ ಎಷ್ಟು ಸಂಸ್ಥೆಗಳಿಗೆ ಎಷ್ಟು ವಿಸ್ತೀರ್ಣದ ಜಾಗವನ್ನು ಮಂಜೂರು ಮಾಡಲಾಗಿದೆ; (ಎ.ಪಿ.ಎಂ.ಸಿ. ವಾರು ವಿವರ ನೀಡುವುದು)

(ಇ) ಇವುಗಳಲ್ಲಿ ಕೃಷಿಯೇತರ ಚಟುವಟಿಕೆಗಳಾದ ಹೋಟೆಲ್‌ಗಳು, ಲಾಡ್ಜ್‌ಗಳು, ಗ್ಯಾರೇಜ್, ಬಾರ್ ಅಂಡ್ ರೆಸ್ಟೋರೆಂಟ್ ಮತ್ತು ಇತರೆ ಉದ್ದೇಶಗಳಿಗೆ ಬಾಡಿಗೆಗೆ ನೀಡಲಾಗಿದೆ ; (ಎ.ಪಿ.ಎಂ.ಸಿ.ವಾರು ವಿವರ ನೀಡುವುದು)

(ಈ) ಕೃಷಿಯೇತರ ಚಟುವಟಿಕೆಗಳಿಗೆ ಬಳಸುತ್ತಿರುವ ಎಷ್ಟು ಜಾಗವನ್ನು ಹಿಂದಕ್ಕೆ ಪಡೆಯಲಾಗಿದೆ ; ಹಾಗೂ ಇನ್ನುಳಿದ ಜಾಗವನ್ನು ಯಾವಾಗ ಹಿಂದಕ್ಕೆ ಪಡೆಯಲಾಗುವುದು ;

(ಉ) ಎ.ಪಿ.ಎಂ.ಸಿ. ಜಾಗವನ್ನು ಕೃಷಿಯೇತರ ಚಟುವಟಿಕೆಗಳಿಗೆ ಮಂಜೂರು ಮಾಡಿರುವ ಸಂಸ್ಥೆಗಳು ಮತ್ತು ಅಧಿಕಾರಿಗಳ ಮೇಲೆ ಕಾನೂನು ರೀತ್ಯಾ ಏನು ಕ್ರಮ ಜರುಗಿಸಲಾಗುವುದು ?

## ಕೃಷಿ ಜಲಾನಯನ ಇಲಾಖೆಯ ವಿಲೀನದಿಂದ ಹೊಂದಾಣಿಕೆ ಕೊರತೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೭೪ (೧೯೬೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಜಲಾನಯನ ಮತ್ತು ಕೃಷಿ ಇಲಾಖೆಗಳು ವಿಲೀನಗೊಂಡಿವೆ ; (ಈ ಸಂಬಂಧ ಹೊರಡಿಸಿರುವ ಅಧಿಸೂಚನೆಯ ಪ್ರತಿ ಒದಗಿಸುವುದು)

(ಆ) ಜಲಾನಯನ ಮತ್ತು ಕೃಷಿ ಇಲಾಖೆಗಳ ವಿಲೀನಕ್ಕೆ ಇರುವ ಮುಖ್ಯ ಕಾರಣಗಳೇನು ; (ವಿವರ ನೀಡುವುದು)

(ಇ) ವಿಲೀನಕ್ಕೂ ಮುಂಚೆ ಜಲಾನಯನ ಮತ್ತು ಕೃಷಿ ಇಲಾಖೆಗಳಲ್ಲಿದ್ದ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಈ) ಈ ಇಲಾಖೆಗಳ ವಿಲೀನದಿಂದಾಗಿ, ವಿಲೀನದ ನಂತರ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ನಡುವೆ ಹೊಂದಾಣಿಕೆ ಕೊರತೆ ಉಂಟಾಗಿದೆಯೇ ; ಇದರಿಂದಾಗಿ ಇಲಾಖೆಯ ಕಾರ್ಯಕ್ರಮ ಅನುಷ್ಠಾನದಲ್ಲಿ ಹಿನ್ನಡೆಯಾಗಿ ರೈತರಿಗೆ ತೊಂದರೆ ಉಂಟಾಗುತ್ತಿದೆಯೇ ;

(ಉ) ಮೇಲಿನ ಎಲ್ಲಾ ಸಮಸ್ಯೆ ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ವಿಕಲಚೇತನ ಕಲ್ಯಾಣ ಕಾರ್ಯಕ್ರಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೭೫ (೧೯೬೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆ (ಪುರಸಭೆ, ನಗರ ಸಭೆ)ಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಕೈಗೊಂಡ ಕ್ರಮಗಳೇನು ;

(ಆ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ವಿಕಲಚೇತನರ ಕಲ್ಯಾಣಕ್ಕಾಗಿ ಕಳೆದ ೨ ವರ್ಷಗಳಲ್ಲಿ ನಿಗದಿಪಡಿಸಿದ ಮತ್ತು ಖರ್ಚಾದ ಅನುದಾನ ಎಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಕಾರ್ಯಕ್ರಮಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳದಿರಲು ಕಾರಣಗಳೇನು ; (ವಿವರ ನೀಡುವುದು)

(ಈ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳನ್ನು

ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಶ್ರೀ ಸಯ್ಯದ ಆದಂ ಖಾದ್ರಿ ದರ್ಗಾವನ್ನು ನವೀಕರಿಸುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೫೭೬ (೨೦೦೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ ಹಿರೇಬಾಗೇವಾಡಿಯಲ್ಲಿರುವ ಶ್ರೀ ಸಯ್ಯದ ಆದಂ ಖಾದ್ರಿ ದರ್ಗಾ ರಾಜ್ಯದಲ್ಲಿಯೇ ಅತೀ ಪ್ರಸಿದ್ಧ ದರ್ಗಾ ಎಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ದರ್ಗಾ ಬೆಳಗಾವಿ-ಹುಬ್ಬಳ್ಳಿ ರಸ್ತೆಯ ಮೇಲೆ ಇರುವ ಸಂಗತಿ ನಿಜವೇ ;

(ಇ) ಈ ದರ್ಗಾ ಮುಸ್ಲಿಂ ಬಾಂಧವರ ಅತೀ ಜಾಗೃತ ದರ್ಗಾವಾಗಿದ್ದು, ರಾಜ್ಯದ ಹಾಗೂ ಹೊರ ರಾಜ್ಯದ ಮುಸಲ್ಮಾನರು ಇಲ್ಲಿನ ದರ್ಗಾ ದರ್ಶನ ಪಡೆದು ನಮಾಜ ಮಾಡಿ ಹೋಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ ಇಲ್ಲಿಗೆ ಬರುವ ಜನರಿಗೆ ವಿಶ್ರಮಿಸಲು ಕೋಣೆಗಳು, ಶುದ್ಧ ಕುಡಿಯುವ ನೀರು ಮೂತ್ರಾಲಯ-ಶೌಚಾಲಯ ಇಲ್ಲದೆ ಇರುವುದರಿಂದ ಯಾತ್ರನಿವಾಸ (ಹಜ್ ಭವನ) ಹಾಗೂ ಎಲ್ಲ ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದೆ ;

(ಉ) ಈ ಇಲಾಖೆಯಲ್ಲಿ ಯಾವುದೇ ಅಧಿಕಾರಿ ಇಲ್ಲದೆ ಇರುವುದರಿಂದ ಉನ್ನತ ಮಟ್ಟದ ಅಧಿಕಾರಿಯನ್ನು ನೇಮಿಸಿ ಅವಶ್ಯವಿರುವ ಕೆಲಸಗಳನ್ನು ಕೈಗೊಳ್ಳಲು ನೈಜಸ್ಥಿತಿ ವರದಿ ಪಡೆದು ಕ್ರಮ ಕೈಗೊಳ್ಳಲಾಗುವುದೆ ;

(ಊ) ಬಡ ಮುಸ್ಲಿಂ ಬಾಂಧವರು ಹಾಗೂ ವಯಸ್ಸಾದವರು ಯಾರು ಮಕ್ಕಾಗೆ ಹೋಗಿ ಬರಲು ಶಕ್ತಿ ಇರುವುದಿಲ್ಲವೋ ಅವರು ಇಲ್ಲಿಗೆ ಬಂದು ನಮಾಜ ಮಾಡಿ ತಮ್ಮ ಜೀವನವನ್ನು ಸಾರ್ಥಕ ಮಾಡಿಕೊಳ್ಳುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರೈತರಿಗೆ ಶಾಪವಾಗುತ್ತಿರುವ ಬೆಳೆ ವಿಮೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೫೭೭ (೧೯೭೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿ ೨೦೧೩-೨೦೧೪ ಹಾಗೂ ೨೦೧೪-೨೦೧೫ನೇ ಸಾಲಿನಲ್ಲಿ ಎಷ್ಟು ರೈತರು ಬೆಳೆ ವಿಮೆ ಮಾಡಿಸಿರುವರು, ಹಾಗೂ ಎಷ್ಟು ಪ್ರೀಮಿಯಂ ಹಣ ತುಂಬಿರುವರು ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಬೆಳೆವಿಮೆ ಮಾಡಿದ ರೈತರಲ್ಲಿ ಎಷ್ಟು ರೈತರಿಗೆ ಬೆಳೆ ವಿಮೆ ನೀಡಲಾಗಿದೆ ; ಹಾಗೂ ಸಂದಾಯವಾಗಿರುವ ಹಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರೈತರು ಬ್ಯಾಂಕಿನಿಂದ, ಸೊಸೈಟಿಯಿಂದ ಸಾಲ ತೆಗೆದುಕೊಂಡಾಗ ಬೆಳೆವಿಮೆ ಮಾಡಿಸಲೇಬೇಕು ಎಂದು ಕಡ್ಡಾಯ ಮಾಡುತ್ತಿದ್ದು,

ರೈತರು ಬೆಳೆವಿಮೆಗಾಗಿ ಪ್ರೀಮಿಯಂ ಹಣ ತುಂಬಿದಷ್ಟು ಸಹ ಬೆಳೆ ಮೂಲಕ ಬರದೇ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಮುಂದಿನ ವರ್ಷ ಕಬ್ಬು ಅರೆಯಲು ತಕರಾರು ಸಾಧ್ಯತೆ ಹಿನ್ನೆಲೆಯಲ್ಲಿ ಸರ್ಕಾರದ ಮುಂದೆ ಸವಾಲುಗಳ ಸರಮಾಲೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೫೭೮ (೧೯೭೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಂದಿನ ವರ್ಷ ಕಬ್ಬು ಬೆಳೆಯುವ ಪ್ರದೇಶ ಸುಮಾರು ಒಂದು ಲಕ್ಷ ಹೆಕ್ಟೇರ್ ಹೆಚ್ಚಿಗೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರೈತರಿಗೆ ನಿಗದಿ ಪಡಿಸಿದ ಹಣ ಕೊಡಿಸುವುದಕ್ಕಾಗಿ ಸರ್ಕಾರ ಸಕ್ಕರೆ ದಾಸ್ತಾನು ವಶ ಪಡಿಸಿಕೊಂಡಿರುವುದು ಹಾಗೂ ಹಲವು ಮೊಕದಮ್ಮೆಗಳನ್ನು ದಾಖಲಿಸಿರುವುದಕ್ಕೆ ಪ್ರತಿಯಾಗಿ ಕಾರ್ಖಾನೆಗಳು ಹಂಗಾಮಿನಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವುದು ಕಬ್ಬು ಅರೆಯುವುದಕ್ಕೆ ತಕರಾರು ಮಾಡುವ ಸಂಭವವಿದ್ದು ಅದಕ್ಕೆ ಈ ಪ್ರಕಾರ ಆಗದಂತೆ ನೋಡಿಕೊಳ್ಳಲು ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಎಫ್.ಆರ್.ಪಿ.ಪ್ರಕಾರ ಹಣ ಕೊಡಬೇಕು ಎಂದು ಮಾಡಿರುವುದರಿಂದ ಕಾರ್ಖಾನೆಯವರಿಗೆ ಹಾನಿ ಆಗುತ್ತಿರುವುದರಿಂದ ಕೇಂದ್ರ ಸರ್ಕಾರದ ಮೇಲೆ ಒತ್ತಾಯ ತಂದು ಕೇಂದ್ರ ಸರ್ಕಾರದಿಂದ ಕಾರ್ಖಾನೆಗಳಿಗೆ ಸಹಾಯ ಮಾಡಲು ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರ ಒತ್ತಾಯ ಮಾಡಲಾಗುವುದೇ;

(ಈ) ಮುಂದಿನ ಸಾಲಿನವರೆಗೆ ರೈತರ ಹಿತ ಕಾಪಾಡಲು ಸರ್ಕಾರ ಯಾವ ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗಿದೆ ;

(ಉ) ಕಾರ್ಖಾನೆಗಳ ಹಿತ ಹಾಗೂ ಅವು ಲಾಭದಾಯಕವಾಗಿ ನಡೆಯಲು ಸರ್ಕಾರ ಯಾವ ಮುಂಜಾಗ್ರತೆ ಕ್ರಮ ಕೈಗೊಂಡಿದೆ ;

(ಊ) ಒಂದು ವೇಳೆ ಕೇಂದ್ರ ಸರ್ಕಾರ ಕಬ್ಬು ಬೆಳೆಗಾರರ ನೆರವಿಗೆ ಬಾರದೆ ಇದ್ದಲ್ಲಿ ರಾಜ್ಯ ಸರ್ಕಾರವು ರೈತರ ನೆರವಿಗೆ ಬರಲು ಯಾವ ಮುಂಜಾಗ್ರತೆ ಕ್ರಮ ಕೈಗೊಂಡಿರುತ್ತದೆ ;

(ಋ) ಕೇಂದ್ರದ ಶೂನ್ಯ ಬಡ್ಡಿದರ ಸಾಲವನ್ನು ಪಡೆಯಲು ಕಾರ್ಖಾನೆಗಳು ಮುಂದಾಗುತ್ತಿರುವುದಿಲ್ಲವೆಂಬ ಸಂಗತಿ ನಿಜವೇ; ಈ ದಿಸೆಯಲ್ಲಿ ಮುಂದಿನ ವರ್ಷ ಕಬ್ಬು ಬೆಳೆಗಾರರ ತೊಂದರೆ ಸರ್ಕಾರದ ಮುಂದೆ ಸವಾಲಾಗಿ ಪರಿಗಣಿಸಿದ್ದು ಅದನ್ನು ಎದುರಿಸಲು ಸರ್ಕಾರವು ಯಾವ ಮುಂಜಾಗ್ರತಾ ಕ್ರಮ ಕೈಗೊಂಡಿದೆ ;

(ಎ) ಕೇಂದ್ರ ಸರ್ಕಾರ ಸೆಸ್ ವಿಧಿಸಿ ಸಕ್ಕರೆ ನಿಧಿ ಸ್ಥಾಪಿಸಲು ರೈತರ ನೆರವಿಗೆ ಬರುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲಾಗುವುದೇ ;

F-3 B/B

(ಏ) ಕಾರ್ಖಾನೆಗಳನ್ನು ರಾಷ್ಟ್ರೀಕೃತಗೊಳಿಸಿದಲ್ಲಿ ಅದರ ಸಾಧಕ-ಭಾದಕಗಳೇನು ? (ವಿವರಿಸುವುದು)

## ರೈತರ ಸಾಲಮಾನ್ನಾ ಮಾಡುವ ಹಾಗೂ ರೈತರ ಸಾಲ ವಸೂಲಿ ಸ್ಥಗಿತಗೊಳಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೫೭೯ (೧೯೭೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತರು ಸಾಲಬಾದೆ ತಾಳದೇ ಸರಣಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದರಿಂದ ರೈತರು ಸಹಕಾರಿ ಬ್ಯಾಂಕುಗಳಿಂದ ಹಾಗೂ ಸಹಕಾರಿ ಸಂಘಗಳಿಂದ ಪಡೆದುಕೊಂಡ ಸಾಲವನ್ನು ಹಿಂದಿರುಗಿಸಲು ತೊಂದರೆಯಾಗುತ್ತಿರುವುದರಿಂದ ಈ ಹಿಂದೆ ಪಡೆದಿರುವ ಸಾಲವನ್ನು ಮನ್ನಾ ಮಾಡಲಾಗುವುದೇ ;

(ಆ) ಸಾಲ ಮನ್ನಾ ಮಾಡಿ ಆದೇಶವನ್ನು ಹೊರಡಸುವವರೆಗೆ ಕನಿಷ್ಟ ಪಕ್ಷ ರೈತರಿಂದ ಸಾಲ ವಸೂಲಿ ಮಾಡದಂತೆ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಸಾಲ ಬಾಧೆ ತಾಳದೇ ಈ ವರ್ಷದಲ್ಲಿ ಎಷ್ಟು ಜನ ರೈತರು ಆತ್ಮಹತ್ಯೆ ಮಾಡಿಕೊಂಡಿರುವವರು ? (ವಿವರ ಒದಗಿಸುವುದು)

## ರೈತರಿಂದ ಸಾಲ ವಸೂಲಿ ಸ್ಥಗಿತಗೊಳಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೫೮೦ (೧೯೭೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರು ಸಾಲಭಾದೆ ತಾಳದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದರಿಂದ ಕೇಂದ್ರ ಸರ್ಕಾರದ ಸಹಕಾರಿ ಬ್ಯಾಂಕುಗಳಿಂದ ಹಾಗೂ ರಾಷ್ಟ್ರೀಕೃತ ಬ್ಯಾಂಕುಗಳಿಂದ ಪಡೆದುಕೊಂಡ ಸಾಲವನ್ನು ಈ ವರ್ಷ ವಸೂಲಿ ಮಾಡದಂತೆ (ಸ್ಥಗಿತಗೊಳಿಸುವಂತೆ) ಕೇಂದ್ರ ಸರ್ಕಾರಕ್ಕೆ ಕೋರಿ ಪತ್ರ ಬರೆಯಲಾಗುವುದೇ ;

(ಆ) ರಾಜ್ಯದಲ್ಲಿ ರೈತರಿಗೆ ಆಗುತ್ತಿರುವ ಅನ್ಯಾಯವನ್ನು ವಿವರವಾಗಿ ತಿಳಿಸಿ ಈ ವರ್ಷ ಸಾಲ ವಸೂಲಿ ಮಾಡದಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಾಯ ತರಲಾಗುವುದೇ ?

## ಹಾಪ್‌ಕಾಮ್ಸ್ ಪದೋನ್ನತಿ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೧ (೧೯೭೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಹಾಪ್‌ಕಾಮ್ಸ್ ಸೊಸೈಟಿಯಲ್ಲಿ ಎಷ್ಟು ಜನ ನೌಕರರು ಕೆಲಸ ನಿರ್ವಹಿಸುತ್ತಿದ್ದಾರೆ ; (ಜಾತಿವಾರು ಮಾಹಿತಿ ಒದಗಿಸುವುದು)

(ಆ) ಬೆಂಗಳೂರಿನ ಹಾಪ್‌ಕಾಮ್ಸ್ ಸೊಸೈಟಿಯಲ್ಲಿ ಎಷ್ಟು ಜನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಕೆಲಸ ನಿರ್ವಹಿಸುತ್ತಿದ್ದಾರೆ ಮತ್ತು ಯಾವ ವಿಭಾಗದಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ ; (ವಿವರಿಸುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರು ೧೦ ವರ್ಷಗಳಿಂದ ಸೇವೆ ಸಲ್ಲಿಸಿದರು ಪದೋನ್ನತಿ ನೀಡದಿರಲು ಕಾರಣವೇನು ;

(ಈ) ಹಾಪ್‌ಕಾಮ್ಸ್‌ನಲ್ಲಿ ಪದೋನ್ನತಿ ಇದೆಯೇ ಇದ್ದಲ್ಲಿ ಎಷ್ಟು ಜನ ನೌಕರರಿಗೆ ಪದೋನ್ನತಿ ನೀಡಲಾಗಿದೇ ಅದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಷ್ಟು ನೌಕರರಿಗೆ ಪದೋನ್ನತಿ ನೀಡಲಾಗಿದೆ ?

## ರಾಜ್ಯದಲ್ಲಿ ರೈತರು ಕೃಷಿಯಿಂದ ವಿಮುಕ್ತರಾಗುತ್ತಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೨ (೧೯೭೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು ಕೃಷಿಯಿಂದ ವಿಮುಕ್ತರಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ ಇದಕ್ಕೆ ಕಾರಣವೇನು ; ರೈತರನ್ನು ಮರಳಿ ಕೃಷಿಯುತ್ತ ಆಕರ್ಷಿಸಲು ಸರ್ಕಾರ ಹಾಕಿಕೊಂಡ ವಿಶೇಷ ಕಾರ್ಯಕ್ರಮಗಳೇನು ;

(ಆ) ರಾಜ್ಯದಲ್ಲಿ ಕೃಷಿ ಭೂಮಿಯನ್ನು ಇತರೆ ಕೃಷಿಯೇತರ ಉದ್ದೇಶಕ್ಕೆ ಬಳಕೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

ದೂರುಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವರ್ಷವಾರು, ವಿವಿಧ ಅಭಿಯಂತರರುಗಳ ಕಚೇರಿವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖಾ ರಸ್ತೆ ಹಾಗೂ ಅಕ್ರಮ ಕಟ್ಟಡ ಹಾಗೂ ಒತ್ತುವರಿ ಕುರಿತು ಮಾನ್ಯ ಉಚ್ಚ ನ್ಯಾಯಾಲಯ ಹಾಗೂ ಕೆಳಹಂತ ನ್ಯಾಯಾಲಯಗಳಲ್ಲಿ ಇರುವ ಪ್ರಕರಣಗಳ ಸಂಖ್ಯೆ



ಗಮನಿಸಿದಲ್ಲಿ, ಕೃಷಿ ಭೂಮಿ ರಕ್ಷಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಭತ್ತಕ್ಕೆ ಬೆಂಬಲ ಬೆಲೆ ಘೋಷಿಸಲಾಗಿದೆಯೇ ; ಘೋಷಿಸಿದ್ದಲ್ಲಿ, ಬೆಂಬಲ ಬೆಲೆ ಎಷ್ಟು; ಬೆಂಬಲ ಬೆಲೆಯ ಮೂಲಕ ರೈತರಿಂದ ಖರೀದಿಸಲಾದ ಭತ್ತದ ಪ್ರಮಾಣವೆಷ್ಟು ; (ವರ್ಷವಾರು, ತಾಲ್ಲೂಕುವಾರು, ಪ್ರಮಾಣವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ರೈತರು ಬೆಳೆದ ಭತ್ತವನ್ನು ಮಾರಾಟ ಮಾಡಿದ ನಂತರ ಸರ್ಕಾರ ಭತ್ತಕ್ಕೆ ಬೆಂಬಲ ಬೆಲೆಯನ್ನು ಘೋಷಿಸುತ್ತಿದೆ ಎನ್ನುವ ಬಾವನೆ ರೈತರಲ್ಲಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

## ಉಡುಪಿ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಗೆ ಕಳಪೆ ಕಾಮಗಾರಿ ಕುರಿತು ಬಂದ ದೂರುಗಳು ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೩ (೧೯೮೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಗೆ ಕಳಪೆ ಕಾಮಗಾರಿಗಳ ಕುರಿತು ಬಂದ ದೂರುಗಳ ಸಂಖ್ಯೆ ಎಷ್ಟು; ಅವು ಯಾವುವು ; ಈ

(ಆ) ರಾಜ್ಯದಲ್ಲಿ ತೋಟಗಾರಿಕಾ ಇಲಾಖೆಯಲ್ಲಿನ ಸಿಬ್ಬಂದಿಗಳ ಕೊರತೆಯಿಂದಾಗಿ ನಿರೀಕ್ಷಿತ ಮಟ್ಟದ ಪ್ರಗತಿ ಸಾಧಿಸಲು ಅಸಾಧ್ಯವಾದುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಇಲ್ಲವಾದಲ್ಲಿ ಕಾರಣವೇನು ?

## ರಾಜ್ಯದ ವಿವಿಧ ಸಹಕಾರ ಸಂಘಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೮೫ (೧೯೮೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿವಿಧ ಸಹಕಾರ ಸಂಘಗಳಲ್ಲಿ ಕಾರ್ಯ-ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವರಲ್ಲಿ ಮಹಿಳಾ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪುರುಷ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯ ವಿವಿಧ ಸಹಕಾರಿ ಸಂಘಗಳಲ್ಲಿ ಕಾರ್ಯ-ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಮಹಿಳಾ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪುರುಷ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಸಹಕಾರಿ ಸಂಘವಾರು, ವಿವರ ನೀಡುವುದು)

(ಇ) ರಾಜ್ಯದಲ್ಲಿ ವಿವಿಧ ಸಹಕಾರಿ ಸಂಘಗಳ ಸಿಬ್ಬಂದಿಗಳ ನೇಮಕಾತಿಯಲ್ಲಿ ಮಹಿಳೆಯರಿಗೆ ಶೇ.೫೦ರ ಪ್ರಾತಿನಿಧ್ಯ ನೀಡಲಾಗಿದೆಯೇ ; ನೀಡಲಾಗದಿದ್ದಲ್ಲಿ ಕಾರಣವೇನು; ಇಲ್ಲವಾದಲ್ಲಿ ನೀಡಲಾಗುವುದು ಯಾವಾಗ ?

## ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಂಭವಿಸಿದ ವಿದ್ಯುತ್ ಅಪಘಾತಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೮೬ (೧೯೮೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿದ್ಯುತ್ ಅಪಘಾತದಿಂದ ಮರಣ ಹೊಂದಿದವರ ಸಂಖ್ಯೆ ಎಷ್ಟು; ಅವರಿಗೆ ನೀಡಲಾದ ಪರಿಹಾರ ಮೊತ್ತವೆಷ್ಟು; ಈ ಅಪಘಾತಗಳಿಗೆ ಕಾರಣಗಳೇನು; (ತಾಲ್ಲೂಕುವಾರು, ವರ್ಷವಾರು ಪ್ರಕರಣವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿದ್ಯುತ್ ಅಪಘಾತಕ್ಕೆ ಬಲಿಯಾದ ಜಾನುವಾರುಗಳ ಸಂಖ್ಯೆ ಎಷ್ಟು; ಅವುಗಳಿಗೆ ನೀಡಲಾದ ಪರಿಹಾರ ಮೊತ್ತವೆಷ್ಟು; ಈ ಅಪಘಾತಗಳಿಗೆ ಕಾರಣಗಳೇನು; (ತಾಲ್ಲೂಕುವಾರು, ವರ್ಷವಾರು, ಪ್ರಕರಣವಾರು ವಿವರ ನೀಡುವುದು)

(ಇ) ಗ್ರಾಮಾಂತರ ಪ್ರದೇಶಗಳಲ್ಲಿ ವಾಲಿರುವ ವಿದ್ಯುತ್ ಕಂಬಗಳನ್ನು, ಜೋತು ಬಿದ್ದಿರುವ ವಿದ್ಯುತ್ ತಂತಿಗಳನ್ನು ಸರಿಪಡಿಸಲು ವರ್ಷಾನುಗಟ್ಟಲೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

ಗಮನಿಸಿದ್ದಲ್ಲಿ, ಅದನ್ನು ಕಾಲಮಿತಿಯೊಂದಿಗೆ ಸರಿಪಡಿಸಲು ಕ್ರಮಕೈಗೊಳ್ಳಲಾಗುವುದೇ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ಜೆಸ್ಕಾಂ ಸಿಬ್ಬಂದಿಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೮೭ (೧೯೮೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಜೆಸ್ಕಾಂನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಈ ಇಲಾಖೆಗೆ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಭಾಗದ ಸಿಬ್ಬಂದಿಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕರ್ನಾಟಕ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃಷಿ ಉತ್ಪನ್ನ ಮಾರುಕಟ್ಟೆಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :-**

೧೫೮೮ (೧೯೮೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಕೃಷಿ ಉತ್ಪನ್ನ ಮಾರುಕಟ್ಟೆಗಳೆಷ್ಟು;

[illegible]
ಖರೀದಿಸಲಾಗುವುದು; (ವಿವರ ನೀಡುವುದು)

(ಆ) UPCL ಕಂಪನಿ ಪ್ರಸ್ತುತ ಯಾರ ಒಡೆತನದಲ್ಲಿದೆ; ಈ ಕಂಪನಿಯ ಒಟ್ಟು ಬಂಡವಾಳವೆಷ್ಟು;

(ಇ) UPCL ಕಂಪನಿಯಿಂದ ಉತ್ಪಾದಿಸುತ್ತಿದ್ದ ವಿದ್ಯುತ್‌ನ್ನು ಯಾವ ಉದ್ದೇಶಕ್ಕಾಗಿ ಉಪಯೋಗಿಸಲಾಗುವುದು? (ವಿವರ ನೀಡುವುದು)

## ರಾಜ್ಯದಲ್ಲಿ ಅಲ್ಪಸಂಖ್ಯಾತ ನಿಗಮದಿಂದ ಬಿಡುಗಡೆಗೊಳಿಸಿದ ಅನುದಾನದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :-**

೧೫೯೦ (೧೯೮೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಲ್ಪಸಂಖ್ಯಾತ ನಿಗಮದಿಂದ ಬಿಡುಗಡೆಗೊಳಿಸಿದ ಅನುದಾನವು ಅಲ್ಪಸಂಖ್ಯಾತರ ಶೇಕಡವಾರು ಜನಸಂಖ್ಯೆ. ಆಧಾರದಲ್ಲಿ ವಿತರಿಸಲಾಗುತ್ತದೆಯೇ; (ವಿವರ ನೀಡುವುದು)

(ಆ) ೨೦೧೪-೧೫ನೇ ಸಾಲಿನಲ್ಲಿ ಮುಸ್ಲಿಂ, ಕ್ರಿಶ್ಚಿಯನ್ ಹಾಗೂ ಜೈನ್ ಸಮುದಾಯಗಳಿಗೆ ಬಿಡುಗಡೆಗೊಳಿಸಿದ ಅನುದಾನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ೨೦೧೪-೧೫ನೇ ಸಾಲಿನಲ್ಲಿ ವೃತ್ತಿಪರ ಕೋರ್ಸುಗಳಿಗೆ ನಿಗಮದಿಂದ ಧನ ಸಹಾಯ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; ಎಷ್ಟು ಮೊತ್ತವನ್ನು ನೀಡಲಾಗಿದೆ ; (ವಿವರ ನೀಡುವುದು)

(ಈ) ಅಲ್ಪಸಂಖ್ಯಾತರ ನಿಗಮದಿಂದ ದೊರಕುವ ಸವಲತ್ತುಗಳ ಬಗ್ಗೆ ಅರಿವು ಮೂಡಿಸಲು ನಿಗಮ ಕೈಗೊಂಡ ಕಾರ್ಯಕ್ರಮಗಳಾವುವು; ಕೈಗೊಂಡಿದ್ದರೆ, ಜಿಲ್ಲಾವಾರು ವಿವರ ನೀಡುವುದು ?

## ಸುರತ್ಕಲ್ ಎನ್.ಐ.ಟಿ.ಕೆ. ಯಿಂದ ಬಿ.ಸಿ. ರೋಡ್ ವರೆಗಿನ ೪ ಪಥ ರಸ್ತೆ ಕಾಮಗಾರಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :-**

೧೫೫೧ (೧೯೮೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸುರತ್ಕಲ್ ಎನ್.ಐ.ಟಿ.ಕೆ. ಯಿಂದ ಬಿ.ಸಿ.ರೋಡ್‌ವರೆಗಿನ ೪ ಪಥ ರಸ್ತೆ ಕಾಮಗಾರಿಯು ಯಾವಾಗ ಪೂರ್ಣಗೊಳ್ಳುವುದು; ಈ ರಸ್ತೆ ವಿಳಂಬಗೊಳ್ಳಲು ಕಾರಣಗಳೇನು; ಈ ಯೋಜನೆಗೆ ಇಲ್ಲಿಯವರೆಗೆ ಖರ್ಚು ಮಾಡಿದ ಅನುದಾನ ಎಷ್ಟು ;

(ಆ) ನಗರದ ಕೆ.ಪಿ.ಟಿ. ಬಳಿ ವಿಮಾನ ನಿಲ್ದಾಣಕ್ಕೆ ಹೋಗುವ ಅಂಡರ್ ಪಾಸ್/ಮೇಲ್ಸೆತುವೆ ರಚನೆಗೆ ಇಲಾಖೆ ಕ್ರಮಕೈಗೊಳ್ಳುವುದೇ ;

(ಇ) ನಂತೂರು ಸರ್ಕಲ್‌ನ ಬಳಿ ಅಪಘಾತ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಇವುಗಳ ನಿಯಂತ್ರಣಕ್ಕೆ ರಸ್ತೆ ಕಾಮಗಾರಿಯನ್ನು ಯಾವಾಗ ಕೈಗೊಳ್ಳಲಾಗುವುದು; (ವಿವರ ನೀಡುವುದು)

(ಈ) ಕರಾವಳಿ ಸರ್ಕಲ್ ಫ್ಲೈ ಓವರ್ ರಸ್ತೆ ನಿರ್ಮಾಣ ವಿಳಂಬಗೊಳ್ಳಲು ಕಾರಣಗಳೇನು ? (ವಿವರ ನೀಡುವುದು)

## "ನಿರಂತರ ಜ್ಯೋತಿ" ಯೋಜನೆಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೫೯೨ (೧೯೯೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಕೈಗೊಂಡ "ನಿರಂತರ ಜ್ಯೋತಿ" ಯೋಜನೆಯ ಪ್ರತಿ ಕಾಮಗಾರಿಯ ವಿವರ ನೀಡುವುದು;

(ಆ) ಯಾವ ಯಾವ ಗ್ರಾಮಗಳಿಗೆ "ನಿರಂತರ ಜ್ಯೋತಿ" ಯೋಜನೆಯಡಿ ಸಂಪರ್ಕ ಕಲ್ಪಿಸಲಾಗಿದೆ;

(ಇ) "ನಿರಂತರ ಜ್ಯೋತಿ" ಯೋಜನೆಯಡಿಯಲ್ಲಿ ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಎಷ್ಟು ಫೀಡರ್‌ಗಳ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ? (ವಿವರಿಸುವುದು)

## ಎನ್.ಟಿ.ಪಿ.ಸಿ.ಯ ವಿದ್ಯುತ್ ಉತ್ಪಾದನೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೫೯೩ (೧೯೯೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯ ಕೂಡಗಿಯಲ್ಲಿರುವ ಎನ್.ಟಿ.ಪಿ.ಸಿ ಸಂಸ್ಥೆಯು ವಿದ್ಯುತ್ ಉತ್ಪಾದನೆಯನ್ನು ಆರಂಭಿಸಿದೆಯೇ ;

(ಆ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ವಿದ್ಯುತ್ ಯಾವ ದಿನಾಂಕದಿಂದ ರಾಜ್ಯಕ್ಕೆ ಲಭ್ಯವಾಗಲಿದೆ; ಈ ವಿದ್ಯುತ್‌ನ್ನು ಪಡೆದುಕೊಳ್ಳುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಕ್ರಮವೇನು ?

## ತುರುವೇಕೆರೆ ತಾಲ್ಲೂಕು ನಿರಂತರ ಜ್ಯೋತಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೧೫೯೪ (೧೮೯೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುರುವೇಕೆರೆ ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಪ್ರಾರಂಭವಾಗಿದ್ದು ಯಾವಾಗ ಹಾಗೂ ಮುಗಿಯುವುದು ಯಾವಾಗ; (ಮಾಹಿತಿ ನೀಡುವುದು)

(ಆ) ನಿಗಧಿತ ಅವಧಿಯಲ್ಲಿ ನಿರಂತರ ಜ್ಯೋತಿ ಸಂಪರ್ಕ ಇಲ್ಲದೆ ಇರುವ ಕಾರಣ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಕೂಡಲೇ ನಿರಂತರ ಜ್ಯೋತಿ ಸಂಪರ್ಕ ಒದಗಿಸಿ ರೈತರಿಗೆ ಅನುಕೂಲ ಮಾಡಿಕೊಡಲಾಗುವುದೇ;

(ಈ) ಇದಕ್ಕೆ ಸಂಬಂಧಿಸಿದಂತೆ ಏನಾದರೂ ಅಡಚಣೆಗಳಿವೆಯೇ ? (ವಿವರ ನೀಡುವುದು)

## ನೇಕಾರರಿಗೆ ಸಮರ್ಪಕ ವಿದ್ಯುತ್ ನೀಡುವುದು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೧೫೯೫ (೧೯೯೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುರುವೇಕೆರೆ ತಾಲ್ಲೂಕು ಮುನಿಯೂರು ಗ್ರಾಮದಲ್ಲಿ ನೂರಾರು ಮನೆಗಳಲ್ಲಿ ನೇಕಾರಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನೇಕಾರಿಕೆ ಮಾಡುತ್ತಿರುವ ಕುಟುಂಬಗಳಿಂದ ಸರ್ಕಾರಕ್ಕೆ ಹೆಚ್ಚಿನ ಆದಾಯ ಬರುತ್ತಿದ್ದರೂ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸದಿರಲು ಕಾರಣವೇನು;

(ಇ) ಹಾಗಿದ್ದಲ್ಲಿ, ಸದರಿ ಗ್ರಾಮಕ್ಕೆ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದೇ ?

## ನಿವೇಶನ ರಹಿತರಿಗೆ ಸೈಟು ನೀಡುವುದು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೧೫೯೬(೧೯೯೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುರುವೇಕೆರೆ ನಗರದಲ್ಲಿ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಬರುವ ಎಷ್ಟು ಜನ ಬಡವರು ನಿವೇಶನ ಕೋರಿ ಅರ್ಜಿ ಸಲ್ಲಿಸಿದ್ದಾರೆ; ಅರ್ಜಿ ಸಲ್ಲಿಸಿದವರಲ್ಲಿ ಎಷ್ಟು ಜನರಿಗೆ ನೀಡಲಾಗಿದೆ;

(ಆ) ಹಲವಾರು ವರ್ಷಗಳಿಂದ ಅರ್ಜಿ ಸಲ್ಲಿಸಿದ್ದರೂ, ಬಡವರಿಗೆ ನಿವೇಶನ ನೀಡದಿರಲು ಕಾರಣವೇನು;

(ಇ) ಬಡವರಿಗೆ ನಿವೇಶನ ನೀಡಲು ತುರುವೇಕೆರೆ ಅಕ್ಕಪಕ್ಕ ಜಮೀನು ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಎಲ್ಲಿ ಗುರುತಿಸಲಾಗಿದೆ ; ಎಷ್ಟು ದಿನಗಳಲ್ಲಿ ಬಡವರಿಗೆ ನಿವೇಶನ ನೀಡಲಾಗುವುದು ? (ವಿವರಿಸುವುದು)

## ಮುಂಗಾರು ಬೆಳೆಗೆ ಸಂಬಂಧಿಸಿದ ಮಾಹಿತಿ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೧೫೯೭ (೧೯೯೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಈ ಬಾರಿ ಮುಂಗಾರು ಬೆಳೆಗೆ ಕಡಿಮೆ ಮಳೆ ಕೊರತೆಯಿಂದ ಬೆಳೆ ಕಡಿಮೆಯಾಗಿದೆಯೇ;

(ಆ) ಎಷ್ಟು ಹೆಕ್ಟೇರ್ ಪ್ರದೇಶಗಳಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಯಾವ ಯಾವ ಮುಂಗಾರು ಬೆಳೆ ಬೆಳೆಯಲಾಗಿತ್ತು;

(ಇ) ಈ ವರ್ಷದ ಮುಂಗಾರು ಮಳೆಯಿಂದ ಬಿತ್ತನೆ ಮಾಡಿರುವ ಎಲ್ಲಾ ಭಾಗದ ಜಿಲ್ಲೆಗಳಲ್ಲಿ ಎಷ್ಟು ಪ್ರಮಾಣದ ಬೆಳೆ ನಿರೀಕ್ಷೆ ಮಾಡಲಾಗಿದೆ;

(ಈ) ಮುಂಗಾರು ಮಳೆಯ ಕೊರತೆಯಿಂದ ಬೆಳೆ ಹಾಳಾಗಿರುವ ರೈತರಿಗೆ ಯಾವ ಪರಿಹಾರ ನೀಡಲಾಗುವುದು ?

## ಮುನಿಯೂರು–ಕೊಂಡಜ್ಜಿ ರಸ್ತೆ ಅಭಿವೃದ್ಧಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :–**

೧೫೫೮ (೧೯೯೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ತಾಲ್ಲೂಕು ಮುನಿಯೂರು–ಕೊಂಡಜ್ಜಿ–ಸಂಪಿಗೆ ರಸ್ತೆ ತುಂಬಾ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೀದರ್–ಶ್ರೀರಂಗಪಟ್ಟಣ ರಸ್ತೆಯು ಮುನಿಯೂರು ಭಾಗವಾಗಿ ಹೋಗುವ ರಸ್ತೆ ತುಂಬಾ ಹಾಳಾಗಿದ್ದು, ವಾಹನಗಳು ಓಡಾಡಲು ತೊಂದರೆಯಾಗಿರುವುದು ತಿಳಿದಿದ್ದರೂ ಈ ರಸ್ತೆಯನ್ನು ಉನ್ನತೀಕರಣ ಮಾಡದಿರಲು ಕಾರಣವೇನು ;

(ಇ) ಈ ವರ್ಷದಲ್ಲಿ ಈ ಕಾಮಗಾರಿಯನ್ನು ತೆಗೆದುಕೊಳ್ಳಲು ಕ್ರಮ ಕೈಗೊಳ್ಳಲಾಗುವುದೇ ?

## ವಿದ್ಯುತ್ ಪರಿವರ್ತಕ ಶಿಥಿಲ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೫೫೯ (೨೦೦೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪುಲಿಕೇಶಿ ನಗರ ವಿಧಾನಸಭಾ ವ್ಯಾಪ್ತಿಯ ಕುಶಾಲನಗರ ವಾರ್ಡ್ ನಾಗವಾರ ಮುಖ್ಯ ರಸ್ತೆಯ ಶ್ರೀ ವೇಣುಗೋಪಾಲ ಸ್ವಾಮಿ ದೇವಸ್ಥಾನದ ರಸ್ತೆಯಲ್ಲಿ ವಿದ್ಯುತ್ ಪರಿವರ್ತಕ ಶಿಥಿಲ ಕಂಬಗಳಿಂದಾಗಿ ಬೀಳುವ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಸಂಬಂಧ ಇದನ್ನು ಯಾವಾಗ ಸರಿಪಡಿಸಲಾಗುವುದು ?

## ದ್ರಾಕ್ಷಿ ದರ ಕುಸಿದಿರುವುದು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೬೦೦ (೨೦೦೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ಬಾರಿ ಅಕಾಲಿಕ ಮಳೆಯಿಂದಾಗಿ ದ್ರಾಕ್ಷಿ ದರ ಕುಸಿದಿರುವುದು ನಿಜವೇ;

(ಆ) ದರ ಕುಸಿತದ ಪ್ರಮಾಣವೇನು;

(ಇ) ರಾಜ್ಯದಲ್ಲಿ ಬೆಳೆಯುವ ದ್ರಾಕ್ಷಿಗೆ ಅನುಸಾರವಾಗಿ ಸೂಕ್ತ ಮಾರುಕಟ್ಟೆ ಹಾಗೂ ಸಂಗ್ರಹಾಲಯ ವ್ಯವಸ್ಥೆ ಇಲ್ಲದಿರುವುದು ನಿಜವೇ; ಈ ಸಂಬಂಧ ಪ್ರಸ್ತುತ ಯಾವ ರೀತಿಯ ವ್ಯವಸ್ಥೆ ಮಾಡಲಾಗಿದೆ;

(ಈ) ಮಾರುಕಟ್ಟೆಯನ್ನು ಇನ್ನಷ್ಟು ಹೆಚ್ಚಿಸಲು ಯಾವ ವಿಶೇಷ ಕ್ರಮ ಕೈಗೊಳ್ಳಲಾಗುವುದು ?

## ಭತ್ತದ ಬೆಲೆ ಕುಸಿತ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೬೦೧ (೧೯೯೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ಬಾರಿ ಭತ್ತದ ಬೆಲೆಯಲ್ಲಿ ಕುಸಿತ ಕಂಡಿರುವುದು ನಿಜವೇ; (ಡಿಸೆಂಬರ್‌ನಿಂದ ಏಪ್ರಿಲ್‌ವರೆಗೆ ಬೆಳೆಯುವ ಬೇಸಿಗೆ ಬೆಳೆಗೆ)

(ಆ) ಚೀನಾದಿಂದ ಅಕ್ಕಿ ಆಮದಾಗುತ್ತಿರುವುದು ನಿಜವೇ;

(ಇ) ಭತ್ತಕ್ಕೆ ಬೆಂಬಲ ಬೆಲೆ ಯಾವಾಗ ಘೋಷಿಸಲಾಗುವುದು ?

## ವಿದ್ಯುತ್ ಕಂಬ ಹತ್ತುವ ಸಾಧನ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೬೦೨ (೨೦೦೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂಧನ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರೊಬ್ಬರು ವಿದ್ಯುತ್ ಕಂಬ ಹತ್ತುವ ಸಾಧನ ಕಂಡು ಹಿಡಿದು ಪ್ರಾಯೋಗಿಕವಾಗಿ ಬಳಸಿ ಯಶಸ್ವಿಯಾಗಿರುವುದು ನಿಜವೇ ; (ವಿವರ ನೀಡುವುದು)

(ಆ) ಈ ಸಾಧನವನ್ನು ಅಭಿವೃದ್ಧಿಪಡಿಸಿ, ಇಲಾಖೆಯಲ್ಲಿ ವಿದ್ಯುತ್ ಕಂಬ ಹತ್ತುವ ಎಲ್ಲಾ ನೌಕರರಿಗೆ ಒದಗಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಪ್ರಿಯದರ್ಶಿನಿ ಮತ್ತು ಆಶಾಕಿರಣ ಯೋಜನೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೦೩ (೨೦೦೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಸಹಕಾರಿ ಸಂಘಗಳಲ್ಲಿ ಹೆಚ್ಚು ಮಹಿಳೆಯರನ್ನು ಸದಸ್ಯರನ್ನಾಗಿ ನೋಂದಾಯಿಸಲು ಪ್ರಿಯದರ್ಶಿನಿ ಮತ್ತು ವಿಕಲ ಚೇತನ ಸಹಕಾರಿಗಳಿಗೆ ಆಶಾಕಿರಣ ಯೋಜನೆಗಳನ್ನು ಜಾರಿ ಮಾಡಿರುವುದು ನಿಜವೇ ; ಹಾಗಿದ್ದಲ್ಲಿ, ಯಾವಾಗ ಜಾರಿ ಮಾಡಲಾಗಿದೆ ;

(ಆ) ಹಾಗಿದ್ದರೆ, ಈ ಯೋಜನೆಗಳ ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಸರ್ಕಾರದಿಂದ ನೀಡಿದ ಪ್ರೋತ್ಸಾಹ ಧನ ಎಷ್ಟು ; ಪ್ರಯೋಜನ ಪಡೆಯಲು ಮಾರ್ಗ ಸೂಚಿಗಳೇನು ? (ವಿವರ ನೀಡುವುದು)

## ಸಹಕಾರ ಸಂಘಗಳಿಂದ ರೈತರಿಗೆ ಆದ ಅನುಕೂಲ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೧೬೦೪ (೨೦೦೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯಲ್ಲಿ ೨೦೧೪-೧೫ನೇ ಸಾಲಿನಲ್ಲಿ ಬಡ್ಡಿ ರಹಿತ ಸಾಲ ಪಡೆದ ರೈತರ ಸಂಖ್ಯೆ ಎಷ್ಟು ; ಮಂಜೂರಾಗಿರುವ ಮೊತ್ತ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿ ಇರುವ ತಾಲ್ಲೂಕು ಮಟ್ಟದ ಸಹಕಾರ ಸೊಸೈಟಿಯಿಂದ ರೈತರ ಅನುಕೂಲಕ್ಕಾಗಿ ಪುನಶ್ಚೇತನ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಇರುವ P.L.D. ಸಹಕಾರ ಸಂಘಗಳಿಂದ ರೈತರಿಗೆ ಸಹಾಯವಾಗಲು ಪುನಶ್ಚೇತನಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ನೂತನವಾಗಿ ೨೦೧೫-೧೬ನೇ ಸಾಲಿಗೆ ಗ್ರಾಮೀಣ ಮಟ್ಟದಲ್ಲಿ ರೈತರ ಅನುಕೂಲಕ್ಕಾಗಿ ಸಹಕಾರ ಸಂಘಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಮಾಸ್ಕಿ ತಾಲ್ಲೂಕಿನಲ್ಲಿ ತೋಟಗಾರಿಕೆ ಅಭಿವೃದ್ಧಿಗೆ ತೆಗೆದುಕೊಂಡ ಕ್ರಮ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೦೫ (೨೦೦೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಯಚೂರು ಜಿಲ್ಲೆಯಲ್ಲಿ ಮಾಸ್ಕಿ ತಾಲ್ಲೂಕಿನಲ್ಲಿರುವ ರಾಜಲಬಂಡಾ ಮತ್ತು ಮಾಸ್ಕಿ ಪಟ್ಟಣದಲ್ಲಿರುವ ತೋಟಗಾರಿಕೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ನಗರಸಭೆ, ಪುರಸಭೆ ಮತ್ತು ನೂತನ ಪಟ್ಟಣ ಪಂಚಾಯತಿಗಳ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೦೬ (೨೦೧೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ನಗರ ಮತ್ತು ಪುರಸಭೆಗಳಲ್ಲಿ ನಡೆದಿರುವ ನಗರೋತ್ಥಾನ ಕಾಮಗಾರಿಗಳಿಗೆ ತಗಲುವ ಅಂದಾಜು ಮೊತ್ತವೆಷ್ಟು; (ವಿವರ ನೀಡುವುದು)

(ಆ) ೨೦೧೫–೧೬ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಅನುದಾನದ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ ;

## ಅಂತರಜಲ ವೃದ್ಧಿ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):-**

೧೬೦೮ (೨೦೧೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತರ ಜಮೀನಿನಲ್ಲಿ ಮಳೆ ನೀರು ಸಂಗ್ರಹವಾಗಲು ಕೃಷಿ ಹೊಂಡ, ಚೆಕ್‌ಡ್ಯಾಮ್, ಇಂಗು ಗುಣಿಗಳ ನಿರ್ಮಾಣ, ಅಂತರಜಲ ವೃದ್ಧಿ ಇತ್ಯಾದಿ ಕಾಮಗಾರಿಗಳಿಗೆ ಮತ್ತು ಜಲಾನಯನ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ವೇತನ, ಭತ್ಯಗಳಿಗಾಗಿ ಸರ್ಕಾರ ಪ್ರತಿ ವರ್ಷ ಅಂದಾಜು ಎಷ್ಟು ಹಣವನ್ನು ಖರ್ಚು ಮಾಡುತ್ತಿದೆ ;

(ಆ) ಸರ್ಕಾರ ನಿರಂತರವಾಗಿ ಹಣ ವ್ಯಯ ಮಾಡುತ್ತಿದ್ದರೂ, ಬಯಲುಸೀಮೆ ಮತ್ತು ಹೈದರಾಬಾದ್-ಕರ್ನಾಟಕ ಜಿಲ್ಲೆಗಳಲ್ಲಿ ರೈತರ ಜಮೀನಿನಲ್ಲಿ ಅಂತರಜಲ ವೃದ್ಧಿಯಾಗದೆ, ತೇವಾಂಶಗಳಿಲ್ಲದೆ, ಸಾವಿರಕ್ಕೂ ಹೆಚ್ಚು ಅಡಿಗಳು ಕೊಳವೆ ಬಾವಿ ಕೊರೆದರೂ ನೀರು ಬಾರದೆ, ರೈತರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಂತರಜಲ ವೃದ್ಧಿ ಮತ್ತು ಜಲಾನಯನ ಇಲಾಖೆಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ಪುರಸಭಾ ಪ್ರದೇಶದ ಬಗ್ಗೆ ಮಾಹಿತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-**

೧೬೦೯ (೨೦೧೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುನ್ಸಿಪಲ್ ಏರಿಯಾ ಅಂದರೆ ಏನು; ಮತ್ತು ಮುನ್ಸಿಪಲ್ ಫಂಡ್ ಅಂದರೆ ಏನು ; ಯಾವುದು ;

(ಆ) ನಗರ ಯೋಜನಾ ಕಾಯ್ದೆಯಡಿ ಬರುವ ಯೋಜನಾ ಪ್ರದೇಶವು ಮುನ್ಸಿಪಲ್ ಏರಿಯಾನೇ ವಿವರಿಸುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತ್‌ಗಳನ್ನಾಗಿ ಪರಿವರ್ತಿಸಲಾಗಿದೆ ? (ವಿವರ ನೀಡುವುದು)

## ಬೀದಿ ದೀಪ ಕಂಬಗಳ ವಿದ್ಯುತ್ ತಂತಿಗಳ ದುರಸ್ತಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೧೦ (೧೪೧೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಲಹಂಕ ಉಪನಗರದ ೨ನೇ ಹಂತದ ೨ನೇ ಕ್ರಾಸಿನ ರಸ್ತೆಗೆ ಅಳವಡಿಸಲಾದ ಬೀದಿ ದೀಪದ ಕಂಬಗಳ ವಿದ್ಯುತ್ ತಂತಿಗಳು ಹಳೆಯದಾಗಿದ್ದು ತುಂಡಾಗಿ ಬೀಳುವ ಸ್ಥಿತಿಯಲ್ಲಿಯೇ ಗಾಳಿ

ಬಂದರೆ ಒಂದಕ್ಕೊಂದು ತಗಲಿ ಆಗಾಗ್ಗೆ ಬೆಂಕಿ ಕಾಣಿಸಿಕೊಳ್ಳುವುದು ಮನೆಗಳ ಗ್ಯಾಲರಿಗೆ ಅತ್ಯಂತ ಹತ್ತಿರವಿದ್ದು ಮಕ್ಕಳು ಯಾವುದೇ ಸಂದರ್ಭದಲ್ಲಿ ಸದರಿ ತಂತಿಗಳು ಮುಟ್ಟುವ ಸ್ಥಿತಿಯಲ್ಲಿದ್ದು, ಅಪಾಯ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುವುದರಿಂದ ಸದರಿ ತಂತಿಗಳ ದುರಸ್ತಿ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು;

(ಆ) ಈ ತಂತಿಗಳನ್ನು ಬದಲಾಯಿಸಿ ಸದರಿ ಸ್ಥಳದಲ್ಲಿ ಕೇಬಲಿಂಗ್ ಮಾಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ಪುರಸಭೆಗಳಲ್ಲಿ ಶವ ಸಾಗಿಸುವ ವಾಹನಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೬೧೧ (೧೪೨೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪಟ್ಟಣ ಪಂಚಾಯಿತಿ, ನಗರಸಭೆ, ಪುರಸಭೆಗಳು ಇವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಇಂತಹ ಎಷ್ಟು ಸ್ಥಳೀಯ ಸಂಸ್ಥೆಗಳಲ್ಲಿ ಶವಸಾಗಿಸುವ ವಾಹನಗಳ ವ್ಯವಸ್ಥೆ ಇದೆ ; (ಪುರಸಭಾವಾರು ವಿವರ ನೀಡುವುದು)

(ಇ) ಶವ ಸಾಗಿಸುವ ವಾಹನ ಇಲ್ಲದ ಪುರಸಭೆಗಳಿಗೆ ವಾಹನ ಒದಗಿಸುವ ಯೋಜನೆ ಸರಕಾರದ ಮುಂದಿದೆಯೇ ?

## ಹಾಸನ ಬಸ್ ನಿಲ್ದಾಣದ ಬಳಿ ರೈಲ್ವೆ ಬ್ರಿಡ್ಜ್ ನಿರ್ಮಿಸುವುದು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೬೧೨ (೧೪೨೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ನಗರದ ಬಸ ನಿಲ್ದಾಣದ ಸಮೀಪವಿರುವ ರೈಲ್ವೆ ಗೇಟಿಗೆ ಆರ್.ಯು.ಬಿ. ಅಥವಾ ಆರ್.ಒ.ಬಿ. ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ನಿರ್ಮಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ; (ವಿವರ ನೀಡುವುದು)

(ಇ) ಇದಕ್ಕೆ ತಗಲಬಹುದಾದ ಅಂದಾಜು ವೆಚ್ಚ ಎಷ್ಟು ; ಸರ್ಕಾರ ಎಷ್ಟರ ಅನುಪಾತದ ಮೊತ್ತವನ್ನು ಭರಿಸಬೇಕಾಗುತ್ತದೆ ?

## ಶಾದಿಭಾಗ್ಯ ಯೋಜನೆಯ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೧೩ (೧೯೪೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾದಿಭಾಗ್ಯ ಯೋಜನೆಯನ್ನು ಸರ್ಕಾರ ಯಾವ ವರ್ಷದಿಂದ ಪ್ರಾರಂಭ ಮಾಡಿದೆ ;

(ಆ) ಈ ಯೋಜನೆಯಲ್ಲಿ ಯಾವ ಯಾವ ವರ್ಗಗಳ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಆಯ್ಕೆ ಮಾಡಲು ಸರ್ಕಾರ ರೂಪಿಸಿದ ಮಾನದಂಡಗಳಾವುವು ;

(ಇ) ಈ ಯೋಜನೆಯಲ್ಲಿ ಪ್ರತಿ ಫಲಾನುಭವಿಗಳಿಗೆ ಸರ್ಕಾರ ನೀಡುವ ಮೊತ್ತವೆಷ್ಟು ;

(ಈ) ಸದರಿ ಯೋಜನೆಯಲ್ಲಿ ಇವರೆವಿಗೂ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಈ ಅರ್ಜಿಗಳಲ್ಲಿ ಮಂಜೂರಾತಿ ಪಡೆದವರು ಎಷ್ಟು ; ಮಂಜೂರಾತಿಯನ್ನು ಪಡೆಯದೇ ಇರುವ ಅನರ್ಹ ಅರ್ಜಿಗಳ ಸಂಖ್ಯೆ ಎಷ್ಟು ;

(ಊ) ಪ್ರತಿ ಜಿಲ್ಲೆಗೆ ನಿಗದಿಪಡಿಸಿದ, ಗುರಿ ಸಾಧಿಸಿದ ಪ್ರಗತಿ ವಿವರಗಳನ್ನು ಜಿಲ್ಲಾವಾರು ನೀಡುವುದು ?

## ಪ್ರಥಮ ದರ್ಜೆ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರು ಹಾಗೂ ಇತರೆ ನೌಕರರನ್ನು ನಿಯೋಜನೆ ಮೇರೆಗೆ ಮರಳಿ ಪಡೆಯುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೧೪ (೧೯೫೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಥಮ ದರ್ಜೆ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರು ಮತ್ತು ಇತರೆ ನೌಕರರು ನಿಯೋಜನೆ ಮೇಲೆ ಕಂದಾಯ ಇಲಾಖೆ ಮತ್ತು ನೋಂದಣಿ ಮತ್ತು ಮುದ್ರಾಂಕ ಇಲಾಖೆಗಳಿಗೆ ತೆರಳಿದ್ದು ಇದರಿಂದ ಇಲಾಖೆಯ ಕಾರ್ಯಕ್ಷಮತೆ ತೊಂದರೆಯಾಗುತ್ತಿಲ್ಲವೇ;

(ಆ) ಹಾಗಿದ್ದರೆ, ಈ ನೌಕರರನ್ನು ಮರಳಿ ನಿಯೋಜನೆಯಿಂದ ಹಿಂಪಡೆಯಲು ಇರುವ ತೊಂದರೆಗಳೇನು ;

(ಇ) ಈ ರೀತಿ ನಿಯೋಜನೆ ಮೇಲೆ ನೀಡಲು ಸಹಕಾರ ಇಲಾಖೆಗೆ ಕೆಲಸದ ಒತ್ತಡಗಳು ಕಡಿಮೆಯಾಗಿವೇ; ನೌಕರರನ್ನು ಮರಳಿ ಹಿಂಪಡೆಯಲು ಯಾವ ಕ್ರಮ ಕೈಗೊಳ್ಳಲಾಗುವುದು ? (ನೌಕರರ ವಿವರ ನೀಡುವುದು)

## ಸಹಕಾರ ಸಂಘಗಳ ನಿಯಮಗಳಿಗೆ ತಿದ್ದುಪಡಿ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೧೫ (೯೫೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ ೦೬-೦೬-೨೦೧೫ ರಂದು ಸಹಕಾರ ಸಂಘಗಳ ನಿಯಮಗಳಿಗೆ ಆಗಿರುವ ತಿದ್ದುಪಡಿಯನ್ವಯ ಸಹಕಾರ ಸಂಘಗಳಿಗೆ ಚುನಾವಣಾಧಿಕಾರಿ ನೇಮಕಾತಿಗೆ ಅಧಿಕಾರವನ್ನು ಯಾರಿಗೆ ನೀಡಲಾಗಿರುತ್ತದೆ ;

(ಆ) ನೀಡಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂ-59/ಕಾ.ಸೂ. 3587/700 ಪ್ರತಿಗಳು/17-07-2015